ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01,	Issue: 274	RNI Number : KNKAN/25/A2770	17-10-2026	Saturday	Page 04,	Price 2/-	suddinimmuru@gmail.com	Mob:-8660146563
ಸಂಪುಟ :01	ಸಂಚಿಕೆ:274	ರಾಯಚೂರು	17-10-2026	ಶನಿವಾರ	ಪುಟ 04	ಬೆಲೆ ರೂ.2/-	Postal Reg Number:RCR/L/RNP/117/2026-28	

ಕೃಷಿ ವಿವಿ ನೇಮಕಾತಿಯಲ್ಲಿ40 ಲಕ್ಷದಿಂದ ₹50 ಲಕ್ಷದವರೆಗೆ ಲಂಚದ ಆರೋಪ: ತನಿಖೆಗೆ ಜೆಡಿಎಸ್ ಆಗ್ರಹ

ರಾಯಚೂರು

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2023ನೇ ಸಾಲಿನಲ್ಲಿ ಸಹಾಯಕ ಪ್ರಾಧ್ಯಾಪಕರು ಸೇರಿದಂತೆ ವಿವಿಧ ಹುದ್ದೆಗಳಿಗೆ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ವ್ಯಾಪಕ ಭ್ರಷ್ಟಾಚಾರ ಹಾಗೂ ನಿಯಮಗಳ ಉಲ್ಲಂಘನೆ ನಡೆದಿದೆ ಎಂದು ಆರೋಪಿಸಿರುವ ಜಿಲ್ಲಾ ಜನತಾದಳ (ಜಾತ್ಯತೀತ) ಪಕ್ಷದ ಜಿಲ್ಲಾಧ್ಯಕ್ಷ ಎಂ. ವಿರೂಪಾಕ್ಷಿ, ನೇಮಕಾತಿ ಆದೇಶಗಳನ್ನು ರದ್ದುಗೊಳಿಸಿ ಪ್ರಕರಣದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.



ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ವಿಶ್ವವಿದ್ಯಾಲಯವು 2023ರ ಅಕ್ಟೋಬರ್ 18ರಂದು ವಿವಿಧ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಿತ್ತು. ಆದರೆ, ನೇಮಕಾತಿಗೆ ಮುನ್ನ ಆರ್ಥಿಕ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯದೆ ನಿಯಮಗಳನ್ನು ಉಲ್ಲಂಘಿಸಲಾಗಿದೆ. ನೇಮಕಾತಿ ಪ್ರಕ್ರಿಯೆಯ ಆರಂಭದಿಂದ ಅಂತಿಮ ಆಯ್ಕೆಯವರೆಗೆ ಹಲವು ಅನುಮಾನಾಸ್ಪದ ಬೆಳವಣಿಗೆಗಳು ನಡೆದಿದ್ದು, ಇವುಗಳ ಬಗ್ಗೆ ಸಮಗ್ರ ತನಿಖೆ ಅಗತ್ಯವಾಗಿದೆ ಎಂದು ಒತ್ತಾಯಿಸಿದರು.

ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಲಿಖಿತ ಪರೀಕ್ಷೆ, ಸಂದರ್ಶನ, ಸ್ಕೋರ್ ಕಾರ್ಡ್ ಹಾಗೂ ಮೀಸಲಾತಿ ರೋಸ್ಟರ್ ಆಧಾರದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ವಿಧಾನವನ್ನು ನಿಗದಿಪಡಿಸಲಾಗಿತ್ತು. ವಿಶ್ವವಿದ್ಯಾಲಯದಲ್ಲಿಯೇ ಪರೀಕ್ಷೆ ನಡೆಸಲು ಅಗತ್ಯ ಸೌಲಭ್ಯಗಳಿದ್ದರೂ, ಪರೀಕ್ಷಾ ಕೇಂದ್ರವನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವ ಉದ್ದೇಶವೇನು ಎಂಬುದಕ್ಕೆ ಆಡಳಿತ ಮಂಡಳಿ ಸ್ಪಷ್ಟನೆ ನೀಡಬೇಕಾಗಿದೆ. ಪರೀಕ್ಷಾ ಕೇಂದ್ರ ಬದಲಾವಣೆಯ ಹಿಂದಿನ ಕಾರಣಗಳು ಹಾಗೂ ಅದಕ್ಕೆ ಅನುಮೋದನೆ ನೀಡಿದ ಅಧಿಕಾರಿಗಳ ಪಾತ್ರವನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಕೆಲವು ಅಭ್ಯರ್ಥಿಗಳಿಂದ ತಲಾ ₹40 ಲಕ್ಷದಿಂದ ₹50 ಲಕ್ಷದವರೆಗೆ ಲಂಚ ಪಡೆಯಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಹಣ ನೀಡಿದ ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಪರೀಕ್ಷಾ ಕೇಂದ್ರಗಳ ಹಂಚಿಕೆ ಹಾಗೂ ಆಯ್ಕೆ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ನಡೆಸಲಾಗಿದೆ ಎಂಬ ಅನುಮಾನವಿದ್ದು, ಈ ಕುರಿತು ನಿಷ್ಪಕ್ಷಪಾತ ತನಿಖೆ ನಡೆದರೆ ಸತ್ಯಾಂಶ ಹೊರಬರಲಿದೆ ಎಂದು ಹೇಳಿದರು.

ನೇಮಕಾತಿಯಲ್ಲಿನ ಅಕ್ರಮ ಆರೋಪಗಳಿಗೆ ಸಂಬಂಧಿಸಿದಂತೆ

3ನೇಯ ಪುಟಕ್ಕೆ

ವಾರ್ಡ್ ನಂ.31: ಪರಿಶಿಷ್ಟ ಜಾತಿಗೆ ಮೀಸಲಾತಿ ನೀಡಲು ಒತ್ತಾಯ



ರಾಯಚೂರು, ಅ.16-ನಗರದ ವಾರ್ಡ್ ನಂ.31ರ ಚುನಾವಣಾ ಅಭ್ಯರ್ಥಿಯ ಮೀಸಲಾತಿಯನ್ನು ಪರಿಶಿಷ್ಟ ಜಾತಿಗೆ ಮತ್ತೊಮ್ಮೆ ಅವಕಾಶ ನೀಡಬೇಕು ಎಂದು ಮಾದಿಗ ದಂಡೋರಾ ಮಾದಿಗ ಮೀಸಲಾತಿ ಹೋರಾಟ ಸಮಿತಿ ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ. ಇತ್ತೀಚೆಗೆ ರಾಯಚೂರು ನಗರಸಭೆಯು ಮೇಲ್ದರ್ಜೆಗೇರಿ ಮಹಾನಗರ ಪಾಲಿಕೆಯಾಗಿದ್ದು, ಈ ಬಾರಿಯ ಮಹಾನಗರ ಪಾಲಿಕೆ ಚುನಾವಣೆಗೆ ಸಂಬಂಧ ಕಳೆದ ಬಾರಿ ವಾರ್ಡ್ ನಂ. 31 ರ ನಗರಸಭಾ ಸದಸ್ಯರ ಮೀಸಲಾತಿ ಪರಿಶಿಷ್ಟ ಜಾತಿಗೆ ನೀಡಿದ್ದು, ಅಭ್ಯರ್ಥಿಯ ಜಾತಿಯ ವಿಷಯವಾಗಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿ ಸಂಪೂರ್ಣ ಅವಧಿ ಮುಗಿದಿದೆ.

5 ವರ್ಷಗಳ ಸುದೀರ್ಘ ಅವಧಿಯಲ್ಲಿ ವಾರ್ಡ್ ನಂ. 31 ರಲ್ಲಿ ಹೇಳಿಕೊಳ್ಳುವಂತಹ ಅಭಿವೃದ್ಧಿ ಕೆಲಸಗಳು ಆಗಿರುವುದಿಲ್ಲ. ಬಹಳಷ್ಟು ಸಮಯ ನ್ಯಾಯಾಲಯದ ತೀರ್ಪು ಬರುವಲ್ಲಿಗೆ ಮುಗಿದು ಹೋಗಿದ್ದು, ಇದರಿಂದಾಗಿ ವಾರ್ಡ್ ಮತದಾರರಿಗೆ ನಿರಾಶೆ ಉಂಟಾಗಿದೆ.ರಾಯಚೂರು ನಗರವು ಮಹಾನಗರ ಪಾಲಿಕೆಯಾಗಿ ಇರುವುದರಿಂದ ಮುಂಬರುವ ಅವಧಿಗೆ ಪರಿಶಿಷ್ಟ ಜಾತಿಗೆ ಮೀಸಲಾತಿ ಅಭ್ಯರ್ಥಿ ಘೋಷಿಸಬೇಕು. ಈ ವಾರ್ಡಿನಲ್ಲಿ ಪರಿಶಿಷ್ಟ ಜಾತಿಯ ಜನರು ಅತ್ಯಧಿಕವಾಗಿ ವಾಸಿಸುತ್ತಿದ್ದು, ಪರಿಶಿಷ್ಟ ಜಾತಿಯ ಅಭ್ಯರ್ಥಿಗೆ ಮೀಸಲಾತಿ ನೀಡಿದರೆ

3ನೇಯ ಪುಟಕ್ಕೆ

ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ.ಸುಧಾ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು:



ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ಅವರು ಇಂದು ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು ನೂತನ ರಾಜ್ಯಪಾಲರಿಗೆ ಅಧಿಕಾರ ಗೌಪ್ಯತಾ ಪ್ರಮಾಣ ವಚನ ಬೋಧಿಸಿದ್ದಾರೆ.

ಹಾಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರ ಅಧಿಕಾರಾವಧಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಡಾ. ಸುಧಾ ಯಾದವ್ ಅವರನ್ನು ಕರ್ನಾಟಕದ ನೂತನ ರಾಜ್ಯಪಾಲರನ್ನಾಗಿ ನೇಮಿಸಿ ಆದೇಶ ಹೊರಡಿಸಿದ್ದರು.

ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ.ಸುಧಾ ಯಾದವ್ ಪ್ರಮಾಣ ವಚನ ಸ್ವೀಕಾರ ( )

ಇಂದು ಲೋಕಭವನದ ಗಾಜಿನ ಮನೆಯಲ್ಲಿ ನಡೆದ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ನಿರ್ಗಮಿತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ. ಜಿ. ಪ'ರ'ಮೆ'ೀಶ್ವ'ರ', ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣ ಪ್ರಕಾಶ್ ಪಾಟೀಲ್, ಪ್ರವಾಸೋದ್ಯಮ ಹಾಗೂ ಇಂದನ ಸಚಿವರಾದ ಕೆ.ಜೆ. ಜಾರ್ಜ್, ಗೃಹ ಸಚಿವ ಪ್ರಿಯಂಕ್ ಖರ್ಗೆ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ವಿಧಾನಸಭೆ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಮತ್ತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಕರ್ನಾಟಕ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ. ಸಲೀಂ, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್ ಸೇರಿದಂತೆ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ರಾಜ್ಯಸಭೆ ಮತ್ತು ಲೋಕಸಭೆ ಸಂಸದರು, ಹೈಕೋರ್ಟ್ ನ್ಯಾಯಮೂರ್ತಿಗಳು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕರ್ನಾಟಕದ 2ನೇ ಮಹಿಳಾ ರಾಜ್ಯಪಾಲೆ: ಡಾ. ಸುಧಾ ಯಾದವ್ ಅವರು ಕರ್ನಾಟಕದ 2ನೇ ಮಹಿಳಾ ರಾಜ್ಯಪಾಲರಾಗಿ ಅಧಿಕಾರ ಅಲಂಕರಿಸಿದ್ದಾರೆ. ಈ ಹಿಂದೆ 1999ರಲ್ಲಿ ವಿ.ಎಸ್. ರಮಾದೇವಿ ಅವರು ರಾಜ್ಯದ ಮೊದಲ ಮಹಿಳಾ ರಾಜ್ಯಪಾಲೆಯಾಗಿ ಸೇವೆ ಸಲ್ಲಿಸಿದ್ದರು.

ಕಾರ್ಗಿಲ್ ಹುತಾತ್ಮ ಯೋಧನ ಪತ್ನಿ: ಸುಧಾ ಯಾದವ್ ಅವರ ಪತಿ ಸುಖಬೀರ್ ಸಿಂಗ್ ಯಾದವ್ ಅವರು ಗಡಿ ಭದ್ರತಾ ಪಡೆಯ () ಉಪ ಕಮಾಂಡೆಂಟ್ ಆಗಿದ್ದು, 1999ರ ಕಾರ್ಗಿಲ್ ಯುದ್ಧದಲ್ಲಿ ಪಾಕಿಸ್ತಾನಿ ಪಡೆಗಳ ಫಿರಂಗಿ ದಾಳಿಗೆ ಎದುರಾಗಿ ಹೋರಾಡಿ ಹುತಾತ್ಮರಾಗಿದ್ದಾರೆ. ಅವರಿಗೆ ಮರಣೋತ್ತರವಾಗಿ ಸೇನಾ ಪದಕ ನೀಡಿ ಗೌರವಿಸಲಾಗಿತ್ತು.

ಉನ್ನತ ಶಿಕ್ಷಣ ಹಾಗೂ ಸಾಧನೆ: ಸುಧಾ ಯಾದವ್ ಅವರು ಐಐಟಿ ರೂರ್ಕಿಯಲ್ಲಿ ರಸಾಯನಶಾಸ್ತ್ರ ವಿಷಯದಲ್ಲಿ ಎಂಎಸ್ಸಿ ಮುಗಿಸಿ ಚಿನ್ನದ ಪದಕ ಗಳಿಸಿದ್ದು, ಪಿಹೆಚ್‌ಡಿ ಪದವೀಧರೆಯಾಗಿದ್ದಾರೆ.

ರಾಜಕೀಯ ಹಾಗೂ ಸಾಂಸ್ಥಿಕ ಅನುಭವ: ಪ್ರಧಾನಿ ನರೇಂದ್ರ ಮೋದಿ ಅವರ ಪ್ರೇರಣೆಯಿಂದ ರಾಜಕೀಯ ಪ್ರವೇಶಿಸಿದ ಇವರು 1999 ರಿಂದ 2004 ರವರೆಗೆ ಹರಿಯಾಣದ ಮಹೇಂದ್ರಗಢ ಲೋಕಸಭಾ ಕ್ಷೇತ್ರದ ಸಂಸದೆಯಾಗಿ ಸೇವೆ ಸಲ್ಲಿಸಿದ್ದಾರೆ. ಬಿಜೆಪಿ ಸಂಸದೀಯ ಮಂಡಳಿಗೆ ಆಯ್ಕೆಯಾದ 2ನೇ ಮಹಿಳೆ (ಸುಷ್ಮಾ ಸ್ವರಾಜ್ ಅವರ ನಂತರ) ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಜೊತೆಗೆ ಬಿಜೆಪಿ ಒಬಿಸಿ ಮೋರ್ಚಾದ ರಾಷ್ಟ್ರೀಯ ಉಸ್ತುವಾರಿಯಾಗಿ ಹಾಗೂ ಕೇಂದ್ರ ಹಿಂದುಳಿದ ವರ್ಗಗಳ ರಾಷ್ಟ್ರೀಯ ಆಯೋಗದ ಸದಸ್ಯೆಯಾಗಿಯೂ ಕಾರ್ಯನಿರ್ವಹಿಸಿದ್ದಾರೆ.

ಅಕ್ಟೋಬರ್ 28ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆ

ರಾಯಚೂರು ಅಕ್ಟೋಬರ್ 16

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2026-27ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ 15 ರಿಂದ 29 ವರ್ಷದೊಳಗಿನವರಿಗೆ ಯುವಜನೋತ್ಸ ವ ಆಯ್ಕೆ ಪ್ರಕ್ರಿಯೆಯನ್ನು ಅನಿವಾರ್ಯ ಕಾರಣಗಳಿಂದ ಅಕ್ಟೋಬರ್ 28ರ ಬೆಳಿಗ್ಗೆ 9ಕ್ಕೆ ನಗರದ ವೇದಾಂತ ಡಿಗ್ರಿ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಯುವಜನಾಂಗವು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ ಅವರು ತಿಳಿಸಿದ್ದಾರೆ.

ಹಿಂದೆ ಅಕ್ಟೋಬರ್ 30ರಂದು ನಡೆಸಲು ನಿರ್ಧಾರಿಲಾಗಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ದಿನಾಂಕವನ್ನು ಹಿಂದೂಡಲಾಗಿದ್ದು, ಅಕ್ಟೋಬರ್ 28ರಂದು ನಡೆಸಲಾಗುವುದು. ಜಿಲ್ಲೆಯ ಸ್ಪರ್ಧಾಳುಗಳು ಸಹಕಾರಿಸುವಂತೆ ಕೋರಲಾಗಿದೆ.

ಸಾಂಸ್ಕೃತಿಕ ಸ್ಪರ್ದೆಗಳ ವಿವರ ಈ ಕೆಳಗಿನಂತಿದೆ: ಜನಪದನೃತ್ಯ ತಂಡದಲ್ಲಿ 7+3 ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 8 ನಿಮಿಷಕ್ಕೆ ಅವಧಿಯನ್ನು ನಿಗದಿಪಡಿಸಲಾಗಿದೆ.

ಜನಪದ ಗೀತೆ ತಂಡದಲ್ಲಿ 7+3 ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 5 ರಿಂದ 8 ನಿಮಿಷಕ್ಕೆ ಅವಧಿಯನ್ನು ನಿಗದಿಪಡಿಸಲಾಗಿದೆ. ಕವಿತೆ ಬರೆಯುವುದು (ಪ್ರಾದೇಶಿಕಭಾಷೆ/ಹಿಂದಿ/ಆಗ್ಲ) ಒಬ್ಬರು ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 1 ಗಂಟೆ 30 ನಿಮಿಷಕ್ಕೆ ಅವಧಿಯನ್ನು ನಿಗದಿಪಡಿಸಲಾಗಿದೆ. ನುಕ್ಕಾಡ್ ನಾಟಕ 10 ಜನ ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 7ನಿಮಿಷಕ್ಕೆ ಸಮಯವನ್ನು ನಿಗದಿಪಡಿಸಲಾಗಿದೆ.

ಮೇಲಿನ ಸ್ಪರ್ಧೆಗಳ ಆಯ್ಕೆ ಪ್ರಕ್ರಿಯೆಯಲ್ಲಿ ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಶಾಲಾ ಕಾಲೇಜು ವಿದ್ಯಾರ್ಥಿಗಳು/ ವಿದ್ಯಾರ್ಥಿನಿಯರು ಹಾಗೂ ಸಂಘ ಸಂಸ್ಥೆಗಳು, ಯುವಕ/ ಯುವತಿ ಮಂಡಳಿಗಳು ಇನ್ನಿತರೇ ಸಂಸ್ಥೆಗಳಿದ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾಳುಗಳು ಭಾಗವಹಿಸಿ ಕಾರ್ಯಕ್ರಮವವನ್ನು ಯಶಸ್ವಿಗೊಳಿಸಬೇಕು. ನಿಗದಿಪಡಿಸಿದ ದಿನಾಂಕ ಹಾಗೂ ಸ್ಥಳದಂದು ಬೆಳಿಗ್ಗೆ 9ಗಂಟೆಯ ಒಳಗಾಗಿ ಸ್ಪರ್ಧಾಳುಗಳು ತಮ್ಮ ಹೆಸರನ್ನು ನೋಂದಾಯಿಸಕೊಳ್ಳತಕ್ಕದ್ದು, ವಯಸ್ಸಿನ

3ನೇಯ ಪುಟಕ್ಕೆ

ಅಡುಗೆ, ಸ್ವಚ್ಛತೆ ಸಿಬ್ಬಂದಿಗಳಿಗೆ ತರಬೇತಿ ಕಾರ್ಯಾಗಾರ

ಸಿಬ್ಬಂದಿಗಳು ಸ್ವಚ್ಛತೆಗೆ ಆದ್ಯತೆ ನೀಡಿ: ಸಹಾಯಕ ಆಯುಕ್ತ ಡಾ.ಹಂಪಣ್ಣ

ರಾಯಚೂರು ಅಕ್ಟೋಬರ್ 16

ಅಡುಗೆ ಸಿಬ್ಬಂದಿಗಳು ವೈಯಕ್ತಿಕ ಸ್ವಚ್ಛತೆ ಕಡೆಗೆ ಆದ್ಯತೆ ನೀಡುವ ಮೂಲಕ ನಿಗದಿತ ಸಮಯದಲ್ಲಿ ಪೌಷ್ಟಿಕ ಆಹಾರ ತಯಾರಿಸಿ, ಮಕ್ಕಳಿಗೆ ನೀಡಬೇಕೆಂದು ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಹೇಳಿದರು.

ಅಕ್ಟೋಬರ್ 16ರ ಶುಕ್ರವಾರ ದಂದು ರಾಯಚೂರು ನಗರದ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನ್ ರಾಮ್ ಅವರ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಕ್ರೈಸ್ ವಸತಿ ಶಾಲೆಯ ಅಧೀನದಲ್ಲಿರುವ ಖಾಯಂ / ಹೊರ ಸಂಪನ್ಮೂಲ ಡಿ-ಗ್ರೂಪ್ ಸಿಬ್ಬಂದಿಗಳಿಗೆ ಅಡುಗೆ ತಯಾರಿಸುವ ಮತ್ತು ಸ್ವಚ್ಛತೆಯನ್ನು ಕಾಪಾಡುವ ಕುರಿತು ಎರಡನೇಯ ದಿನದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಅಡುಗೆ ಸಿಬ್ಬಂದಿ ಕಡ್ಡಾಯವಾಗಿ ಸ್ವಚ್ಛವಾದ ಬಟ್ಟೆಗಳನ್ನು ಧರಿಸಬೇಕು. ಉಗುರುಗಳನ್ನು ಚಿಕ್ಕದಾಗಿ ಕತ್ತರಿಸಿಕೊಂಡು, ತಲೆಗೆ ಕ್ಯಾಪ್ ಹಾಗೂ ಕೈಗೌಜುಗಳನ್ನು ಧರಿಸಿ ಅಡುಗೆ ಮಾಡುವುದು ಉತ್ತಮ. ಶಾಲೆ ಅಥವಾ ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳಿಗೆ



ಟಿಫಿನ್ ಮತ್ತು ಮಧ್ಯಾಹ್ನ ಹಾಗೂ ರಾತ್ರಿಯ ಊಟವನ್ನು ನಿಗದಿತ ಸಮಯಕ್ಕೆ ಸರಿಯಾಗಿ ಸಿದ್ಧಪಡಿಸಬೇಕು. ಸಮಯ ಪಾಲನೆ ಮಾಡದಿದ್ದರೆ ಅಡುಗೆಯಲ್ಲಿ ವ್ಯತ್ಯಾಸವಾಗಿ ಮಕ್ಕಳ ಆರೋಗ್ಯದಲ್ಲಿ ಏರುಪೇರಾಗಬಹುದು ಅಥವಾ ದೂರುಗಳು ಬರುತ್ತವೆ ಎಂದರು.

ಪ್ರಿ-ಮೆಟ್ರಿಕ್ ಅಥವಾ ಪೋಸ್ಟ್ ಮೆಟ್ರಿಕ್ ನಿಲಯಗಳಲ್ಲಿ 50, 100, 200 ಹಾಗೂ 300 ಮಕ್ಕಳಿರುವಲ್ಲಿ ಅಡುಗೆ ಸಿಬ್ಬಂದಿ ಮಕ್ಕಳೊಂದಿಗೆ ಸೌಜನ್ಯದಿಂದ ಹಾಗೂ ಉತ್ತಮ ಸಂವಹನದಿದ ನಡೆದುಕೊಳ್ಳಬೇಕು. ಸಿಬ್ಬಂದಿ ಸರಿಯಾಗಿ ಸ್ಪಂದಿಸದಿದ್ದರೆ ಮಕ್ಕಳಿಂದ ದೂರುಗಳು ಬರುವ ಸಾಧ್ಯತೆ ಇರುತ್ತದೆ ಎಂದರು.

ನಿಲಯಗಳ ಸಿಬ್ಬಂದಿಗೆ ಯಾವುದೇ ಸಮಸ್ಯೆಗಳಿದ್ದರೂ ನಿಲಯ ಪಾಲಕರು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ ತಂದು ನಿವಾರಿಸಿಕೊಳ್ಳಲು ಅವಕಾಶವಿದೆ. ಮೂರು ದಿನಗಳ ತರಬೇತಿಯ ಮುಖ್ಯ ಉದ್ದೇಶವೆಂದರೆ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಮತ್ತು ಸ್ವಚ್ಛವಾದ ಊಟವನ್ನು ಒದಗಿಸುವುದಾಗಿದೆ. ತರಬೇತಿ ಪಡೆದ ಬಳಿಕವೂ ನಿಯಮಗಳನ್ನು ಪಾಲಿಸದೆ ಲೋಪದೋಷಗಳು ಕಂಡುಬದಲ್ಲಿ ನೇರವಾಗಿ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ. ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಮತ್ತು ಉತ್ತಮ

3ನೇಯ ಪುಟಕ್ಕೆ


ರಾಯಚೂರಿನಲ್ಲಿ ನಿಲ್ಲದ ರೈತರ ಆತ್ಮಹತ್ಯೆ ಸರಣಿ, ಪರಿಹಾರ ವಿತರಣೆಯ ಅಂಕಿ-ಅಂಶಗಳಲ್ಲೇ ಗೊಂದಲ!

ಕೃಷಿ ಪ್ರಧಾನ ಜಿಲ್ಲೆಯೆಂಬ ಹೆಗ್ಗಳಿಕೆ ಹೊಂದಿರುವ ರಾಯಚೂರಿನಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳು ಮುಂದುವರಿದಿರುವುದು ಕೃಷಿ ವಲಯ ಎದುರಿಸುತ್ತಿರುವ ಬಿಕ್ಕಟ್ಟಿನ ಗಂಭೀರತೆಯನ್ನು ಎತ್ತಿತೋರಿಸಿದೆ. 2023-24ರಿಂದ 2025-26ನೇ ಸಾಲಿನವರೆಗೆ ಜಿಲ್ಲೆಯಲ್ಲಿ ಒಟ್ಟು 55 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿದೆ.

ಈ ಪೈಕಿ 42 ಪ್ರಕರಣಗಳನ್ನು ಪರಿಹಾರಕ್ಕೆ ಅರ್ಹವೆಂದು ಗುರುತಿಸಲಾಗಿದೆ. ಮತ್ತೊಂದೆಡೆ, ಪರಿಹಾರ ವಿತರಣೆಯ ಅಂಕಿ-ಅಂಶಗಳಲ್ಲಿ ವ್ಯತ್ಯಾಸ ಕಂಡುಬರುತ್ತಿರುವುದು, ತಿರಸ್ಕೃತ ಪ್ರಕರಣಗಳ ಹಿನ್ನೆಲೆ ಹಾಗೂ ಅರ್ಹ ಕುಟುಂಬಗಳಿಗೆ ನೆರವು ತಲುಪಿದೆಯೇ ಎಂಬ ಪ್ರಶ್ನೆಗಳು ಮಹತ್ವ ಪಡೆದುಕೊಂಡಿವೆ.

ಕೃಷಿ ನಷ್ಟ, ಸಾಲದ ಹೊರೆ ಮತ್ತು ಆರ್ಥಿಕ ಸಂಕಷ್ಟದಿಂದ ರೈತ ಕುಟುಂಬಗಳು ನಲುಗುತ್ತಿರುವ ಸಂದರ್ಭದಲ್ಲಿ, ಆತ್ಮಹತ್ಯೆ ಪ್ರಕರಣಗಳ ಸಂಖ್ಯೆಯನ್ನು ದಾಖಲಿಸುವುದಷ್ಟೇ ಆಡಳಿತದ ಜವಾಬ್ದಾರಿಯಲ್ಲ. ಇಂತಹ ದುರಂತಗಳಿಗೆ ಕಾರಣವಾಗುತ್ತಿರುವ ಸಮಸ್ಯೆಗಳನ್ನು ಗುರುತಿಸಿ, ರೈತ ಕುಟುಂಬಗಳಿಗೆ ಸಕಾಲದಲ್ಲಿ ಪರಿಹಾರ ಮತ್ತು ಶಾಶ್ವತ ನೆರವು ಒದಗಿಸುವುದು ಅತ್ಯಗತ್ಯವಾಗಿದೆ.

ಲಭ್ಯವಿರುವ ಅಂಕಿ-ಅಂಶಗಳ ಪ್ರಕಾರ, 2023-24ನೇ ಸಾಲಿನಲ್ಲಿ ಜಿಲ್ಲೆಯಲ್ಲಿ 15 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿವೆ. ಈ ಪೈಕಿ 13 ಪ್ರಕರಣಗಳು ಪರಿಹಾರಕ್ಕೆ ಅರ್ಹವೆಂದು ಗುರುತಿಸಲ್ಪಟ್ಟಿದ್ದು, ಎರಡು ಪ್ರಕರಣಗಳು ತಿರಸ್ಕೃತವಾಗಿವೆ. 2024-25ನೇ ಸಾಲಿನಲ್ಲಿ ಪ್ರಕರಣಗಳ ಸಂಖ್ಯೆ 23ಕ್ಕೆ ಏರಿಕೆಯಾಗಿದೆ. ಈ ಪೈಕಿ 19 ಪ್ರಕರಣಗಳು ಅರ್ಹವೆಂದು ಪರಿಗಣಿಸಲ್ಪಟ್ಟರೆ, ನಾಲ್ಕು ಪ್ರಕರಣಗಳು ತಿರಸ್ಕೃತವಾಗಿವೆ. 2025-26ನೇ ಸಾಲಿನಲ್ಲಿ 17 ಪ್ರಕರಣಗಳು ವರದಿಯಾಗಿದ್ದು, 10 ಪ್ರಕರಣಗಳು ಅರ್ಹವೆಂದು ಗುರುತಿಸಲ್ಪಟ್ಟಿವೆ. ಉಳಿದ ಏಳು ಪ್ರಕರಣಗಳು ತಿರಸ್ಕೃತವಾಗಿವೆ.



ಮೂರು ವರ್ಷಗಳಲ್ಲಿ ಒಟ್ಟು 55 ಪ್ರಕರಣಗಳು ವರದಿಯಾಗಿದ್ದು, 42 ಪ್ರಕರಣಗಳು ಅರ್ಹ ಹಾಗೂ 13 ಪ್ರಕರಣಗಳು ತಿರಸ್ಕೃತವಾಗಿವೆ. ವಿಶೇಷವಾಗಿ 2025-26ನೇ ಸಾಲಿನಲ್ಲಿ ವರದಿಯಾದ 17 ಪ್ರಕರಣಗಳಲ್ಲಿ ಏಳು ಪ್ರಕರಣಗಳು ತಿರಸ್ಕೃತವಾಗಿರುವುದು, ಪ್ರಕರಣಗಳ ಪರಿಶೀಲನೆ ಮತ್ತು ಅರ್ಹತೆ ನಿರ್ಧರಿಸುವ ಪ್ರಕ್ರಿಯೆಯ ಬಗ್ಗೆ ಹೆಚ್ಚಿನ ಸ್ಪಷ್ಟತೆ ಅಗತ್ಯವಿದೆ ಎಂಬುದನ್ನು ಸೂಚಿಸುತ್ತದೆ.

ರೈತರ ಆತ್ಮಹತ್ಯೆ ಪ್ರಕರಣಗಳಿಗೆ ಸಂಬಂಧಿಸಿದ ಪರಿಹಾರ ವಿತರಣೆಯ ವಿವರಗಳ ಪ್ರಕಾರ, 2023-24ನೇ ಸಾಲಿನಲ್ಲಿ 17 ಪ್ರಕರಣಗಳಿಗೆ ₹85 ಲಕ್ಷ ಹಾಗೂ 2024-25ನೇ ಸಾಲಿನಲ್ಲಿ 17 ಪ್ರಕರಣಗಳಿಗೆ ₹85 ಲಕ್ಷ ವಿತರಿಸಲಾಗಿದೆ ಎಂದು ತಿಳಿಸಲಾಗಿದೆ. 2025-26ನೇ ಸಾಲಿನಲ್ಲಿ ಈವರೆಗೆ 10 ಪ್ರಕರಣಗಳಿಗೆ ₹50 ಲಕ್ಷ ಪರಿಹಾರ ನೀಡಿರುವುದಾಗಿ ಅಂಕಿ-ಅಂಶಗಳು ಉಲ್ಲೇಖಿಸುತ್ತವೆ. ಈ ವಿವರಗಳನ್ನು ಒಟ್ಟುಗೂಡಿಸಿದರೆ ಮೂರು ವರ್ಷಗಳಲ್ಲಿ 44 ಪ್ರಕರಣಗಳಿಗೆ ₹2.20 ಕೋಟಿ ಪರಿಹಾರ ವಿತರಿಸಿದಂತಾಗುತ್ತದೆ. ಪ್ರತಿ ಪ್ರಕರಣಕ್ಕೆ ₹5 ಲಕ್ಷದಂತೆ ಲೆಕ್ಕ ಹಾಕಿದಾಗ ಈ ಮೊತ್ತ ಸರಿಹೊಂದುತ್ತದೆ.

ಪ್ರಕರಣಗಳ ಅರ್ಹತೆ ಕುರಿತ ಅಂಕಿ-ಅಂಶಗಳ ಪ್ರಕಾರ ಮೂರು ವರ್ಷಗಳಲ್ಲಿ 42 ಪ್ರಕರಣಗಳು ಮಾತ್ರ ಅರ್ಹವೆಂದು ಗುರುತಿಸಲ್ಪಟ್ಟಿವೆ. ಪರಿಹಾರ ವಿತರಣೆಯ ವಿವರಗಳಲ್ಲಿ 44 ಪ್ರಕರಣಗಳು ದಾಖಲಾಗಿರುವುದರಿಂದ, ಈ ವ್ಯತ್ಯಾಸಕ್ಕೆ ಕಾರಣವೇನು ಎಂಬ ಪ್ರಶ್ನೆ ಎದುರಾಗಿದೆ. ಹಿಂದಿನ ಸಾಲಿನ ಪ್ರಕರಣಗಳಿಗೆ ಪರಿಹಾರ ವಿತರಿಸಲಾಗಿದೆಯೇ ಅಥವಾ ಅಂಕಿ-ಅಂಶಗಳ ದಾಖಲಾತಿಯಲ್ಲಿ ವ್ಯತ್ಯಾಸವಿದೆಯೇ ಎಂಬುದನ್ನು ಸಂಬಂಧಪಟ್ಟ ಇಲಾಖೆಯು ಸ್ಪಷ್ಟಪಡಿಸಬೇಕಿದೆ.

ಪರಿಹಾರ ವಿತರಣೆಯ ಸಂಖ್ಯೆಯನ್ನು ಮಾತ್ರ ಮುಂದಿಟ್ಟುಕೊಳ್ಳದೆ, ಅರ್ಹ ಕುಟುಂಬಗಳಿಗೆ ನಿಜವಾಗಿಯೂ ಹಣ ತಲುಪಿದೆಯೇ, ಯಾವ ಅವಧಿಯಲ್ಲಿ ವಿತರಿಸಲಾಗಿದೆ ಹಾಗೂ ಇನ್ನೂ ಎಷ್ಟು ಕುಟುಂಬಗಳು ನೆರವಿಗಾಗಿ ಕಾಯುತ್ತಿವೆ ಎಂಬುದರ ಬಗ್ಗೆಯೂ ಪಾರದರ್ಶಕ ಮಾಹಿತಿ ಬಹಿರಂಗಪಡಿಸುವ ಅಗತ್ಯವಿದೆ.

ರೈತ ಮುಖಂಡ ಶಿವಪುತ್ರ ಜಾಗೀರ ನಂದಿಹಾಳ ಅವರು ಮಾತನಾಡಿ, ''ಸಾಲದ ಹೊರೆ ಮತ್ತು ಬ್ಯಾಂಕ್ ಸಿಬ್ಬಂದಿಯ ಕಿರುಕುಳದಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದರೂ, ಕೆಲವು ಪ್ರಕರಣಗಳಲ್ಲಿ ಅಧಿಕಾರಿಗಳು ವರದಿಗಳನ್ನು ತಿರುಚಿ ವೈಯಕ್ತಿಕ ಕಾರಣಗಳಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ದಾಖಲಿಸುತ್ತಾರೆ'' ಎಂದು ಆರೋಪಿಸಿದರು.

''ವಿಮಾನ ಅಪಘಾತದಲ್ಲಿ ಮೃತಪಟ್ಟವರಿಗೆ ಸರ್ಕಾರಗಳು ₹20 ಲಕ್ಷ ಪರಿಹಾರ ನೀಡುತ್ತವೆ. ಆದರೆ, ಸಾಲ ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಅತ್ಯಲ್ಪ ಪರಿಹಾರ ನೀಡಲಾಗುತ್ತದೆ ಎಂಬುದು ರೈತರ ಸ್ಥಿತಿಯ ಬಗ್ಗೆ ಸರ್ಕಾರಗಳು ತೋರುತ್ತಿರುವ ನಿರ್ಲಕ್ಷ್ಯವನ್ನು ಪ್ರತಿಬಿಂಬಿಸುತ್ತದೆ'' ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರ ಆತ್ಮಹತ್ಯೆ ಪ್ರಕರಣಗಳ ತನಿಖೆ ನಿಷ್ಪಕ್ಷಪಾತವಾಗಿ ನಡೆಯಬೇಕು. ಸಾಲದ ಹೊರೆ, ಬ್ಯಾಂಕ್ ವ್ಯವಹಾರಗಳು ಮತ್ತು ಕೃಷಿ ನಷ್ಟದಂತಹ ಅಂಶಗಳನ್ನು ಸಮಗ್ರವಾಗಿ ಪರಿಶೀಲಿಸಬೇಕು. ಯಾವುದೇ ಕುಟುಂಬವು ಅರ್ಹ ಪರಿಹಾರದಿಂದ ವಂಚಿತವಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂಬುದು ರೈತ ಸಂಘಟನೆಗಳ ಪ್ರಮುಖ ಬೇಡಿಕೆಯಾಗಿದೆ.

ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬದ ಸದಸ್ಯರು, ಸಾಲ ತೀರಿಸಲಾಗದ ಪರಿಸ್ಥಿತಿ ಮತ್ತು ಬ್ಯಾಂಕ್ ಸಿಬ್ಬಂದಿಯ ಕಿರುಕುಳದಿಂದ ತಮ್ಮ ಮನೆಯವರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಅಳಲು ತೋಡಿಕೊಂಡಿದ್ದಾರೆ. ಬ್ಯಾಂಕ್ ಸಿಬ್ಬಂದಿಯ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಹಾಗೂ ಸರ್ಕಾರದಿಂದ ದೊರೆಯಬೇಕಾದ ಪರಿಹಾರವೂ ವಿಳಂಬವಾಗುತ್ತಿದೆ ಎಂದು ಆರೋಪಿಸಿದ್ದಾರೆ.

3ನೇಯ ಪುಟಕ್ಕೆ

ಕಾಂಗ್ರೆಸ್ ಸ್ಟಿಂಗ್ ಆಪರೇಷನ್‌ಗಳನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿದೆ : ಛಲವಾದಿ ನಾರಾಯಣಸ್ವಾಮಿ ಆರೋಪ



ಕಲಬುರಗಿ,

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸ್ಟಿಂಗ್ ಆಪರೇಷನ್‌ಗಳನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷರ ವಿರುದ್ಧ ವಾಗ್ದಾಳಿ ನಡೆಸಿ, ಕಾಂಗ್ರೆಸ್ ಪಕ್ಷವೇ ಸ್ಟಿಂಗ್ ಆಪರೇಷನ್‌ಗಳ ಕಾರ್ಖಾನೆಯಾಗಿದೆ ಎಂದು ಟೀಕಿಸಿದರು.

''ನನಗೂ ಸ್ಟಿಂಗ್ ಆಪರೇಷನ್ ಮಾಡಿಸಬೇಕೆಂದು ಹೇಳಿದ್ದೇನೆ. ಮುಖ್ಯಮಂತ್ರಿಯವರ ಸ್ಟಿಂಗ್ ಆಪರೇಷನ್ ಮಾಡಿದವರ ವಿರುದ್ಧ ಏಕೆ ಕ್ರಮ ಕೈಗೊಂಡಿಲ್ಲ? ಅಥವಾ ಸಚಿವರು ಹಾಗೂ ಅಧಿಕಾರಿಗಳನ್ನು ಬ್ಲ್ಯಾಕ್‌ಮೇಲ್ ಮಾಡಲು ಅದನ್ನು ಬಳಸಿಕೊಳ್ಳಲಾಗಿದೆಯೇ?'' ಎಂದು ಪ್ರಶ್ನಿಸಿದರು.

ಅಧಿಕಾರದಲ್ಲಿದ್ದಾಗ ನಡೆಯದ ಸ್ಟಿಂಗ್ ಆಪರೇಷನ್‌ಗಳು ಅಧಿಕಾರದಿಂದ ದೂರವಾದ ಬಳಿಕ ಏಕೆ ನಡೆಯುತ್ತಿವೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಈ ವಿಚಾರದಲ್ಲಿ ಕಾನೂನು ಕ್ರಮ ಕೈಗೊಳ್ಳಲು ಹಿಂದೇಟು ಹಾಕುತ್ತಿರುವುದೇಕೆ ಎಂದು ಪ್ರಶ್ನಿಸಿದ ಅವರು, ಮುಖ್ಯಮಂತ್ರಿ ಗಂಭೀರವಾಗಿ ನಡೆದುಕೊಳ್ಳಬೇಕು. ಜನರು ಮುಖ್ಯಮಂತ್ರಿಯ ಹೇಳಿಕೆಗಳನ್ನು ನೋಡಿ ನಗುವಂತಹ ಪರಿಸ್ಥಿತಿ ನಿರ್ಮಾಣವಾಗಬಾರದು ಎಂದರು.

ಲಿಂಗಾಯತ ಮಠಾಧೀಶರನ್ನು ರಾಯಭಾರಿಗಳಾಗಿ ಬಳಸಿಕೊಳ್ಳಬೇಕು ಎಂಬ ರೀತಿಯ ಹೇಳಿಕೆಗಳು ಚಿಂತಾಜನಕವಾಗಿವೆ. ಸಾರ್ವಜನಿಕ ಜೀವನದಲ್ಲಿರುವವರು ಜನರ ಭಾವನೆಗಳಿಗೆ ಗೌರವ ನೀಡುವ ರೀತಿಯಲ್ಲಿ ಮಾತನಾಡಬೇಕು ಎಂದು ಹೇಳಿದರು.

ಎಕರೆಗೆ 25 ಸಾವಿರ ರೂ. ಪರಿಹಾರ ನೀಡಲಿ :

ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆದು ಮೂರು ದಿನ ಕಳೆದರೂ ಸೂಕ್ತ ಪರಿಹಾರ ದೊರೆತಿಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು. ರೈತರಿಗೆ ಎಕರೆಗೆ 25 ಸಾವಿರ ರೂ. ಪರಿಹಾರ ನೀಡಬೇಕೆಂದು ಒತ್ತಾಯಿಸಿದ್ದರೂ ಸರ್ಕಾರ ಕೇವಲ 2,500 ರೂ. ಘೋಷಿಸಿದೆ. ಘೋಷಿಸಿರುವ ಪರಿಹಾರದ ಹಣವೂ ಇನ್ನೂ ರೈತರ ಖಾತೆಗಳಿಗೆ ಜಮೆಯಾಗಿಲ್ಲ ಎಂದು ದೂರಿದರು.

ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿದ್ದು, ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ ಎಂದು ಆರೋಪಿಸಿದ ಅವರು, ಸರ್ಕಾರ ತನ್ನ ಹಣಕಾಸಿನ ಸ್ಥಿತಿಗತಿ ಕುರಿತು ಶ್ವೇತಪತ್ರ ಹೊರಡಿಸಬೇಕು. ಬಳಿಕ ಕೇಂದ್ರ ಸರ್ಕಾರವನ್ನು ಸಂಪರ್ಕಿಸಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿ (ಎನ್‌ಡಿಆರ್‌ಎಫ್) ಅಡಿ ಪರಿಹಾರ ಪಡೆಯಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಎಸ್‌ಐಆರ್ ವಿರುದ್ಧದ ಹೋರಾಟ ರಾಜಕೀಯ ಪ್ರೇರಿತ :

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಮಾತನಾಡಿದ ಅವರು, 2002ರಲ್ಲಿಯೂ ಎಸ್‌ಐಆರ್ ನಡೆದಿತ್ತು. ಈಗಲೂ ಅದೇ ಪ್ರಕ್ರಿಯೆ ನಡೆಯುತ್ತಿದೆ. ಒಬ್ಬರ ಹೆಸರೇ ಎರಡು-ಮೂರು ಬಾರಿ ದಾಖಲಾಗಿದ್ದರೆ, ಮೃತಪಟ್ಟವರು ಹಾಗೂ ವಿದೇಶದಲ್ಲಿರುವವರ ಹೆಸರುಗಳು ಪಟ್ಟಿಯಲ್ಲಿದ್ದರೆ ಅವುಗಳನ್ನು ತೆಗೆದುಹಾಕುವುದು ಈ ಪ್ರಕ್ರಿಯೆಯ ಉದ್ದೇಶವಾಗಿದೆ ಎಂದರು.

ಸುಪ್ರೀಂ ಕೋರ್ಟ್ ಕುರಿತು ಆರೋಪಗಳನ್ನು ಮಾಡುವ ಬದಲು, ಸಮಸ್ಯೆಗಳಿದ್ದರೆ ನ್ಯಾಯಾಲಯದ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಬೇಕು. ಅನ್ಯಾಯ ಅಥವಾ ಅಪಮಾನವನ್ನು ಸಹಿಸಿಕೊಂಡು ಮೌನವಾಗಿರುವುದು ಇಡೀ ಕರ್ನಾಟಕಕ್ಕೆ ಅಪಮಾನ ಮಾಡಿದಂತಾಗುತ್ತದೆ ಎಂದು ಹೇಳಿದರು.

ದಲಿತರಿಗೆ ಶೇ.24ರಷ್ಟು ಮೀಸಲಾತಿ ಉಳಿಸಲು ಆಗ್ರಹ :

ಪರಿಶಿಷ್ಟ ಜಾತಿಗಳ ಮೀಸಲಾತಿ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ದಲಿತರಿಗೆ ಅನ್ಯಾಯ ಮಾಡುತ್ತಿದೆ ಎಂದು ಛಲವಾದಿ ನಾರಾಯಣಸ್ವಾಮಿ ದೂರಿದರು. ಬಿಜೆಪಿ ಸರ್ಕಾರ ಜನಸಂಖ್ಯೆಗೆ ಅನುಗುಣವಾಗಿ ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹೆಚ್ಚಿಸಿತ್ತು. ಇದರಿಂದ ವೈದ್ಯಕೀಯ, ಎಂಜಿನಿಯರಿಂಗ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಅವಕಾಶಗಳು ದೊರೆಯುತ್ತಿದ್ದವು. ಒಳಮೀಸಲಾತಿಯಲ್ಲಿಯೂ ಇದರ ಪ್ರಯೋಜನ ಲಭಿಸುತ್ತಿತ್ತು ಎಂದು ಹೇಳಿದರು.

ನಮೋಶಿಗೆ ಮೊದಲ ಪ್ರಾಶಸ್ತ್ಯದ ಮತ ನೀಡಿ :

ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಗೆಲುವು ಸಾಧಿಸುವುದು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಕಲ್ಯಾಣ ಕರ್ನಾಟಕದ ಸಮಸ್ಯೆಗಳಿಗೆ ನಿರಂತರವಾಗಿ ಧ್ವನಿಯಾಗುತ್ತಿರುವ ನಮೋಶಿ ಅವರಿಗೆ ಶಿಕ್ಷಕರು ಮೊದಲ ಪ್ರಾಶಸ್ತ್ಯದ ಮತ ನೀಡಬೇಕು ಎಂದು ಮನವಿ ಮಾಡಿದರು.

ಶಶೀಲ್ ಜಿ. ನಮೋಶಿ ಅವರು ಜನರ ಆಶೀರ್ವಾದದಿಂದ ನಾಲ್ಕು ಬಾರಿ ಶಾಸಕರಾಗಿ ಸೇವೆ ಸಲ್ಲಿಸಿದ್ದಾರೆ. ಶಿಕ್ಷಕರ ಸಮಸ್ಯೆಗಳಿಗೆ ಮಾತ್ರ ಸೀಮಿತವಾಗದೆ, ಪದವೀಧರರು, ವಿದ್ಯಾರ್ಥಿಗಳು, ದಲಿತರು ಹಾಗೂ ರೈತರು ಸೇರಿದಂತೆ ಎಲ್ಲ ವರ್ಗಗಳ ಸಮಸ್ಯೆಗಳಿಗೆ ಪಕ್ಷಭೇದ ಮರೆತು ಸ್ಪಂದಿಸಿದ್ದಾರೆ. ಯಾವುದೇ ಸಮಸ್ಯೆ ಎದುರಾದರೂ ಮೊದಲು ಧ್ವನಿ ಎತ್ತಿ ನ್ಯಾಯಕ್ಕಾಗಿ ಹೋರಾಡುವ ಗುಣ ಅವರಲ್ಲಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ವಿಭಾಗ ಸಹಪ್ರಭಾರಿ ಶರಣಪ್ಪ ತಳವಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಬೆಣ್ಣೂರ, ಶಿವರಾಜ ಪಾಟೀಲ್ ರದ್ದೇವಾಡಗಿ, ಅಂಬಾರಾಯ್ ಅಷ್ಟಗಿ, ಧರ್ಮಣ್ಣ ಇಟಗಾ, ಗಿರಿರಾಜ್ ಯಳಮೇಲಿ, ರಾಜು ನಾಗೇನಹಳ್ಳಿ, ಸಂತೋಷ ಹಾದಿಮನಿ, ಆನಂದ ಪಾಟೀಲ್, ಮಹೇಂದ್ರ ಪೂಜಾರಿ, ಗಿರೀಶ್ ಭಜಂತ್ರಿ, ಬಾಬುರಾವ್ ಹಾಗರಗುಂಡಗಿ, ಶಿವ ಅಷ್ಟಗಿ ಹಾಗೂ ನಾಗರಾಜ್ ಮಹಾಗಾಂವಕರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ವಸ್ತು ಖರೀದಿಸಿದ ನಂತರ ಬಿಲ್ ಪಡೆಯುವುದು ಕಡ್ಡಾಯ-ನ್ಯಾ.ಮರಿಯಪ್ಪ

ಯಾದಗಿರಿ,

ಪ್ರತಿಯೊಬ್ಬ ನಾಗರೀಕನು ತಾನು ಖರೀದಿಸುವ ಪ್ರತಿಯೊಂದು ವಸ್ತು ಅಥವಾ ಸೇವೆಗೆ ಕಡ್ಡಾಯವಾಗಿ ಬಿಲ್ ಪಡೆಯಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ಅವರು ಹೇಳಿದರು.

ಅವರು ಬುಧವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಜಿಲ್ಲಾ ನ್ಯಾಯವಾದಿಗಳ ಸಂಘ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಲಿಂಗೇರಿ ಕೋನಪ್ಪ ಮಹಿಳಾ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಗ್ರಾಹಕರ ಹಕ್ಕುಗಳ ಕುರಿತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಬಿಲ್ ಹೊಂದುವುದರಿಂದ ವಂಚನೆ ಅಥವಾ ಕಳಪೆ ಗುಣಮಟ್ಟದ ವಸ್ತುಗಳಿಂದ ಆಗುವ ನಷ್ಟವನ್ನು ತಡೆಯಲು ಹಾಗೂ ಗ್ರಾಹಕ ನ್ಯಾಯಾಲಯದಲ್ಲಿ ಕಾನೂನುಬದ್ಧವಾಗಿ ಹಕ್ಕುಗಳನ್ನು ಪ್ರತಿಪಾದಿಸಲು ಸುಲಭವಾಗುತ್ತದೆ. ವ್ಯಾಪಾರಿಗಳ ಶೋಷಣೆಯಿಂದ ಪಾರಾಗಲು ಪ್ರತಿಯೊಬ್ಬರೂ ತಮ್ಮ ಗ್ರಾಹಕ ಹಕ್ಕುಗಳು ಮತ್ತು ಜವಾಬ್ದಾರಿಗಳ ಕುರಿತು ಜಾಗೃತರಾಗಿರಬೇಕೆಂದರು. ಪ್ರಭಾರಿ ಅಧ್ಯಕ್ಷರಾದ ಮಾಲತಿ ಗುರನ್ನ ಮಾತನಾಡಿ, ಗ್ರಾಹಕರಿಗೆ ತೊಂದರೆಯಾದರೆ ಗ್ರಾಹಕರ ಆಯೋಗಕ್ಕೆ ಅರ್ಜಿ ಸಲ್ಲಿಸಬೇಕು ಹಾಗೂ ವಸ್ತುವಿನ ಗುಣಮಟ್ಟ ಪರಿಶೀಲಿಸಬೇಕು ಮತ್ತು ಜಿಲ್ಲಾ ಆಯೋಗದಲ್ಲಿ ಪ್ರಕರಣಗಳಲ್ಲಿ ನೀಡಿದ ತೀರ್ಪುಗಳ ಉದಾಹರಣೆಯೊಂದಿಗೆ ವಿವರಿಸಿ ಹೇಳಿದರು. ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್. ಮಾಲಿಪಾಟೀಲ್ ಮಾತನಾಡಿ, ಗ್ರಾಹಕರ ಹಕ್ಕುಗಳು ಹಾಗೂ ಕರ್ತವ್ಯಗಳ ಬಗ್ಗೆ ಮಾತನಾಡಿದರು. ಈ ಸಂದರ್ಭದಲ್ಲಿ ಲಿಂಗೇರಿ ಕೋನಪ್ಪ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲ ಜಿ.ಎಂ.ವಿಶ್ವಕರ್ಮ, ಫರ್ಹಾನ್ ಬೇಗಂ, ಜಿಲ್ಲಾ ಆಯೋಗದ ಶಿರಸ್ತೇದಾರ ಚಲಪತಿರಾಜ,ಧನರಾಜ ಪಾತ್ರೆ, ಭಾಗ್ಯಶ್ರೀ, ಸುಪರ್ಣಾ, ಆಯೋಗದ ಮತ್ತು ಕಾಲೇಜಿನ ಸಿಬ್ಬಂದಿ ವರ್ಗದವರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬರಗಾಲದ ಆತಂಕದ ನಡುವೆ ಜಾನುವಾರುಗಳಿಗೆ ಮೇವು, ಕುಡಿಯುವ ನೀರಿನ ವ್ಯವಸ್ಥೆ : ಸಚಿವ ಈಶ್ವರ್ ಖಂಡ್ರೆ



ಹುಲಸೂರು:

ಬರಗಾಲದ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಗುರು ಬಸವೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಡಾ. ಶಿವಾನಂದ ಸ್ವಾಮೀಜಿ ಅವರ 75ನೇ ವರ್ಷದ ಜನ್ಮದಿನದ ಅಮೃತ ಮಹೋತ್ಸವವನ್ನು ಡಿಸೆಂಬರ್ 1 ಮತ್ತು 2ರಂದು ಆಯೋಜಿಸಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಬುಧವಾರ ಹಾಲಹಳ್ಳಿ ರಸ್ತೆಯ ಅಲ್ಲಮಪ್ರಭು ಶೂನ್ಯಪೀಠದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಡಾ. ಶಿವಾನಂದ ಸ್ವಾಮೀಜಿ ಅವರ 75ನೇ ವರ್ಷದ ಜನ್ಮದಿನದ ಅಮೃತ ಮಹೋತ್ಸವಕ್ಕೆ ಮುಖ್ಯಮಂತ್ರಿ, ಉಪ ಮುಖ್ಯ ಮಂತ್ರಿ, ಕೇಂದ್ರ ಸಚಿವರು, ಸಾಹಿತಿಗಳು ಹಾಗೂ ಗಣ್ಯರನ್ನು ಆಹ್ವಾನಿಸಲಾಗುವುದು ಎಂದು ತಿಳಿಸಿದರು. ರೈತರು, ಮಹಿಳೆಯರು, ಯುವಕರು, ನಿರುದ್ಯೋಗಿಗಳು ಮತ್ತು ಪರಿಸರಕ್ಕೆ ಸಂಬಂಧಿಸಿದ ಚಿಂತನಗೋಷ್ಠಿಗಳನ್ನು ಆಯೋಜಿಸಿ, ಕಾರ್ಯಕ್ರಮವವನ್ನು ಯಶಸ್ವಿಗೊಳಿಸಲು ವಿವಿಧ ಸಮಿತಿಗಳನ್ನು ರಚಿಸುವಂತೆ ಸಲಹೆ ನೀಡಿದರು.

ಡಾ. ಶಿವಾನಂದ ಸ್ವಾಮೀಜಿ ಅವರು ಸುಮಾರು 23 ಸಾವಿರ ಕಿ.ಮೀ. ಪಾದಯಾತ್ರೆ ಕೈಗೊಂಡು ಭಾರತದಿಂದ ನೇಪಾಳದವರೆಗೆ ಬಸವತತ್ವದ ಪ್ರಚಾರ ಮಾಡಿದ್ದಾರೆ. ಪ್ರವಚನಗಳ ಮೂಲಕ ಯುವಜನರಲ್ಲಿ ವಿಚಾರವಂತಿಕೆ, ಸಂಸ್ಕಾರ ಹಾಗೂ ತಂದೆ-ತಾಯಿಯರ ಬಗ್ಗೆ ಗೌರವ ಬೆಳೆಸುವ ಕಾರ್ಯ ಮಾಡುತ್ತಿದ್ದಾರೆ. ಅವರ ಸೇವೆ ಒಂದು ಸಮುದಾಯಕ್ಕೆ ಸೀಮಿತವಾಗದೆ ಸಕಲ ಜನರ ಶ್ರೇಯಸ್ಸನ್ನು ಬಯಸುತ್ತದೆ ಎಂದು ಈಶ್ವರ್ ಖಂಡ್ರೆ ಹೇಳಿದರು.

ಶಾಸಕ ಶರಣು ಸಲಗರ ಮಾತನಾಡಿ, ಬರಗಾಲದಿಂದ ಬೆಳೆ ನಷ್ಟ ಹಾಗೂ ಸಾಲದ ಸಂಕಷ್ಟ ಎದುರಿಸುತ್ತಿರುವ ರೈತರ ನೆರವಿಗಾಗಿ ಶ್ರೀಗಳ ಹೆಸರಿನಲ್ಲಿ ಗೋಶಾಲೆ ಆರಂಭಿಸಬೇಕು ಎಂದು ಮನವಿ ಮಾಡಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ್ ಮಾತನಾಡಿ, ಶ್ರೀಗಳು ದೇಶದಾದ್ಯಂತ ಬಸವತತ್ವ ಮತ್ತು ವಚನ ಸಾಹಿತ್ಯದ ಪ್ರಚಾರ ಕೈಗೊಂಡಿದ್ದಾರೆ. ಅವರ ಸೇವೆಗೆ ಭಕ್ತರು ವಿಶೇಷ ಗೌರವ ಸಲ್ಲಿಸಬೇಕು ಎಂದು ಹೇಳಿದರು. ಡಾ. ಶಿವಾನಂದ ಸ್ವಾಮೀಜಿ ಮಾತನಾಡಿ, 1981ರಲ್ಲಿ ಮಠದ ಪೀಠಾಧಿಪತಿಯಾಗಿ ಅಧಿಕಾರ ವಹಿಸಿಕೊಂಡಾಗ ಮಠ ತೀವ್ರ ಬಡತನದಲ್ಲಿತ್ತು. ಭಕ್ತರ ಸಹಕಾರದಿಂದ ಮಠ ಅಭಿವೃದ್ಧಿ ಹೊಂದಿದೆ ಎಂದು ಸ್ಮರಿಸಿದರು. ನವೆಂಬರ್ 2ರಿಂದ 26ರವರೆಗೆ ಬಸವ ಪುರಾಣ, ನವೆಂಬರ್ 28ರಿಂದ 30ರವರೆಗೆ ವಿಶೇಷ ಚಿಂತನಗೋಷ್ಠಿಗಳು ನಡೆಯಲಿದ್ದು, ಡಿಸೆಂಬರ್ 1 ಮತ್ತು 2ರಂದು ಅಮೃತ ಮಹೋತ್ಸವ ಜರುಗಲಿದೆ. ಅಲ್ಲಮಪ್ರಭು ಶೂನ್ಯಪೀಠದ ಪಕ್ಕದ ನಾಲ್ಕು ಎಕರೆ ಜಾಗದಲ್ಲಿ ಬೃಹತ್ ವೇದಿಕೆ ನಿರ್ಮಿಸಲು ಉದ್ದೇಶಿಸಲಾಗಿದೆ. ಮಹಿಳೆಯರು ವಚನ ಗ್ರಂಥಗಳನ್ನು ಹೊತ್ತು ರಥ ಎಳೆಯುವ ಪರಂಪರೆಯೂ ಇರಲಿದೆ ಎಂದು ತಿಳಿಸಿದರು.

ಅಮೃತ ಮಹೋತ್ಸವ ಸಮಿತಿಯ ಅಧ್ಯಕ್ಷರಾಗಿ ಸಚಿವ ಈಶ್ವರ್ ಖಂಡ್ರೆ ಹಾಗೂ ಕಾರ್ಯಾಧ್ಯಕ್ಷರಾಗಿ ಶಾಸಕ ಶರಣು ಸಲಗರ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಾಬು ವಾಲಿ, ಮಲ್ಲಪ್ಪ ಧಬಾಲೆ, ನಾಗೇಶ್ ಮೇತ್ರೆ, ಆಕಾಶ್ ಖಂಡಾಳೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸುರೇಶ್ ಚನ್ನಶೆಟ್ಟಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್ ದೇವಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ದೀಪಾರಾಣಿ ಬೋಸ್ಲೆ, ಪ್ರವೀಣ್ ಹನುಮಶೆಟ್ಟಿ, ವಿವೇಕ್ ಚಳಕಾಪುರ್, ಸುಧೀರ್ ಕಾಡಾದಿ, ಲತಾ ಹಾರಕೂಡೆ, ರೂಪವತಿ ಜಾಧವ್, ರಾಮಶೆಟ್ಟಿ ಪನ್ನಾಳೆ, ನೀಲಕಂಠ ರಾಠೋಡ್, ರಾಜೇಂದ್ರ ಗಂದಗೆ, ಸೋಮನಾಥಪ್ಪ ಅಷ್ಟೂರೆ, ಸಿದ್ರಾಮ್ ಕಾಮಣ್ಣಾ, ನಾಗರಾಜ್ ಹಾವಣ್ಣ, ಜ್ಞಾನೇಶ್ವರ್ ಮುಳೇ, ಶಿವರಾಜ್ ಪಾಟೀಲ್, ಅರವಿಂದ್ ಹರಪಲ್ಲೆ ಹಾಗೂ ಶಿವಶರಣಪ್ಪ ಮಿಠಾರೆ ಸೇರಿದಂತೆ ವಿವಿಧ ಕ್ಷೇತ್ರಗಳ ಪ್ರಮುಖರು, ಜನಪ್ರತಿನಿಧಿಗಳು ಮತ್ತು ಭಕ್ತರು ಉಪಸ್ಥಿತರಿದ್ದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶಶೀಲ್ ಜಿ.ನಮೋಶಿ ಪರ ಶಾಸಕ ಪ್ರಭು ಚವ್ಹಾಣ್ ಪ್ರಚಾರ



ಔರಾದ್:

ಈಶಾನ್ಯ ಶಿಕ್ಷಕರ ಮತಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಶಾಸಕ ಪ್ರಭು ಚವ್ಹಾಣ್ ಅವರು ಬುಧವಾರ ಕ್ಷೇತ್ರದ ವಿವಿಧ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ, ಎನ್‌ಡಿಎ ಅಭ್ಯರ್ಥಿ ಶಶೀಲ್ ಜಿ.ನಮೋಶಿ ಅವರ ಪರವಾಗಿ ಪ್ರಚಾರ ನಡೆಸಿದರು.

ಸಂತಪುರದ ಸಿದ್ದರಾಮೇಶ್ವರ ಕಾಲೇಜು, ಔರಾದ್ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು, ಪತ್ರಿಸ್ವಾಮಿ ಕಾಲೇಜು, ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ) ಹಾಗೂ ಅಮರೇಶ್ವರ ಕಾಲೇಜು ಸೇರಿದಂತೆ ಕ್ಷೇತ್ರದ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿದ ಅವರು, ಶಿಕ್ಷಕರು ಹಾಗೂ ಮತದಾರರನ್ನು ಭೇಟಿಯಾಗಿ ಎನ್‌ಡಿಎ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಪರವಾಗಿ ಮತಯಾಚಿಸಿದರು.

ಮತದಾನದ ವೇಳೆ ಪ್ರಾಶಸ್ತ್ಯದ ಮತ ಚಲಾಯಿಸುವಾಗ ಮತದಾರರು ಮಾಡುವ ಸಣ್ಣ ತಪ್ಪುಗಳಿಂದ ಮತಗಳು ತಿರಸ್ಕೃತಗೊಳ್ಳುವ ಸಾಧ್ಯತೆಗಳಿವೆ. ಕಳೆದ ಚುನಾವಣೆಯಲ್ಲಿಯೂ ಸಾವಿರಾರು ಮತಗಳು ತಿರಸ್ಕೃತಗೊಂಡಿವೆ. ಆದ್ದರಿಂದ ಮತದಾನ ಮಾಡುವಾಗ ಪ್ರತಿಯೊಬ್ಬರೂ ಅತ್ಯಂತ ಎಚ್ಚರಿಕೆ ವಹಿಸಬೇಕು ಎಂದು ಶಾಸಕ ಪ್ರಭು ಚವ್ಹಾಣ ಹೇಳಿದರು.

ಈ ಹಿನ್ನೆಲೆಯಲ್ಲಿ ಪಕ್ಷದಿಂದ ನೇಮಕಗೊಂಡಿರುವ ಘಟನಾಯಕರು ತಮ್ಮ ವ್ಯಾಪ್ತಿಯ ಶಿಕ್ಷಕರಿಗೆ ಮತದಾನದ ಕುರಿತು ಸರಿಯಾದ ಮಾರ್ಗದರ್ಶನ ನೀಡಬೇಕು. ಯಾವುದೇ ಮತ ತಿರಸ್ಕೃತವಾಗದಂತೆ ಅಗತ್ಯ ಎಚ್ಚರಿಕೆ ವಹಿಸಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ವಸಂತ್ ಬಿರಾದಾರ್ ಧೊಂಡಿಬಾ ನರೋಟೆ, ಶಿವಾಜಿರಾವ್ ಪಾಟೀಲ್ ಮುಂಗನಾಳ್, ಶಿವರಾಜ್ ಅಲ್ಮಾಜೆ, ಪ್ರಕಾಶ್ ಅಲ್ಮಾಜೆ, ಖಂಡೋಬಾ ಕಂಗಟೆ, ಕೇರಬಾ ಪವಾರ್ ದಯಾನಂದ್ ಘೂಳೆ, ಸಂತೋಷ್ ಪೋಕಲವಾರ್, ಸಂಜು ವಡೆಯಾರ್, ಗುಂಡಪ್ಪ ಮುಧಾಳೆ, ಯಾದು ಮೇತ್ರೆ, ಅಶೋಕ್ ಅಲ್ಮಾಜೆ, ಆನಂದ್ ದ್ಯಾಡೆ, ರಾಜಪ್ಪ ಸೋರಾಳೆ, ಶಿವಕುಮಾರ್ ಪಾಂಚಾಳ್, ನಾಗಶೆಟ್ಟಿ ಗಾದಗೆ, ಅಶೋಕ್ ಶೆಂಬೆಳ್ಳಿ, ಸುನೀಲ್ ಸುಸಲಾದೆ, ಸಂಗಮೇಶ್ ದೇಶಮುಖ, ಅಬ್ಬುಲ್ ಪಠಾಣ್, ಸುಜಿತ್ ರಾಠೋಡ್, ಧನಾಜಿ ರಾಠೋಡ್, ಮಂಜು ಸ್ವಾಮಿ, ಬಾಲಾಜಿ ಠಾಕೂರ್ ಹಾಗೂ ಅಂಬಾದಾಸ್ ನೇಳಗೆ ಸೇರಿದಂತೆ ಸ್ಥಳೀಯ ಮುಖಂಡರು, ಪಕ್ಷದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಬಸವಣ್ಣನವರ ವಿಚಾರಧಾರೆ ಕುರಿತು ಮುಕ್ತ ವಾದ-ಸಂವಾದ ಅಗತ್ಯ: ಶಾಸಕ ಬಿ.ಆರ್.ಪಾಟೀಲ್



ಆಳಂದ:

ಸಾಂಸ್ಕೃತಿಕ ನಾಯಕ ಬಸವಣ್ಣನವರ ವಿಚಾರಧಾರೆ ಹಾಗೂ ವಚನ ಸಾಹಿತ್ಯದ ಪ್ರಸ್ತುತತೆ ಕುರಿತು ಸಾಹಿತಿಗಳನ್ನು ಆಹ್ವಾನಿಸಿ ವೇದಿಕೆ ಸಿದ್ಧಪಡಿಸಿ ಉಪನ್ಯಾಸ ನೀಡುವುದಷ್ಟೇ ಸಾಲದು. ಯಾವುದೇ ಪೂರ್ವಾಗ್ರಹವಿಲ್ಲದೆ ಮುಕ್ತವಾಗಿ ವಾದ-ಸಂವಾದಗಳು ನಡೆದಾಗ ಮಾತ್ರ ಜನರಲ್ಲಿ ಜಾಗೃತಿ ಮೂಡಿಸಲು ಸಾಧ್ಯ ಎಂದು ಶಾಸಕ ಬಿ.ಆರ್. ಪಾಟೀಲ್ ಅಭಿಪ್ರಾಯಪಟ್ಟರು.

ಪಟ್ಟಣದ ಸಮತಾ ಲೋಕ ಶಿಕ್ಷಣ ಸಮಿತಿಯ ಅಡಿಯಲ್ಲಿ ನಡೆಯುತ್ತಿರುವ ಸಂಬುದ್ಧ ಪದವಿ ಕಾಲೇಜಿನ ಆವರಣದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕ ಹಾಗೂ ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ಬಸವಣ್ಣನವರ ವಿಚಾರಧಾರೆ ಮತ್ತು ವಚನ ಸಾಹಿತ್ಯದ ಪ್ರಸ್ತುತತೆ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸಮಾಜದಲ್ಲಿ ಬಸವಣ್ಣನವರ ವಿಚಾರಧಾರೆಗಳು ಮತ್ತಷ್ಟು ಪ್ರಸ್ತುತವಾಗಿವೆ. ವಚನಗಳನ್ನು ಅಧ್ಯಯನ ಮಾಡುವುದರ ಜೊತೆಗೆ ಅವುಗಳ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾನತೆ, ಸೌಹಾರ್ದತೆ ಹಾಗೂ ಮೌಢ್ಯಮುಕ್ತ ಸಮಾಜ ನಿರ್ಮಾಣದ ಆಶಯ ಸಾಕಾರಗೊಳ್ಳಲು ಸಾಧ್ಯ ಎಂದು ಹೇಳಿದರು.

ಕಲಬುರಗಿಯ ನಿವೃತ್ತ ಪ್ರಾಧ್ಯಾಪಕ ಹಾಗೂ ಸಂಪನ್ಮೂಲ ವ್ಯಕ್ತಿ ಡಾ. ಟಿ. ಗುರುಬಸಪ್ಪ ವಿಚಾರಗೋಷ್ಠಿ ನಡೆಸಿಕೊಟ್ಟು ಮಾತನಾಡಿ, ಬಸವಣ್ಣನವರು ಸರ್ವಕಾಲಿಕ ದಾರ್ಶನಿಕ ನಾಯಕರು. ಅವರ ವಚನಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶನ ನೀಡುತ್ತಿದ್ದು, ಮಾನವ ಬದುಕಿನಲ್ಲಿ ಸಮಾನತೆ, ಮಾನವೀಯತೆ ಹಾಗೂ ವೈಚಾರಿಕ ಚಿಂತನೆಗಳ ಮಹತ್ವವನ್ನು ಸಾರುತ್ತವೆ ಎಂದರು.

ಕಾಲೇಜಿನ ಪ್ರಾಚಾರ್ಯ ಸಂಜಯ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಲಬುರಗಿಯ ಅಖಿಲ ಭಾರತ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ವಡ್ಡನಕೇರಿ, ಸಂಸ್ಥೆಯ ಸಿಇಒ ವಿ. ರಂಗಸ್ವಾಮಿ ಶೆಟ್ಟಿ, ಅಫಜಲಪುರದ ಪ್ರಾಧ್ಯಾಪಕ ಡಾ. ಶಿವಶರಣಪ್ಪ ಮೋತಕಪಲ್ಲಿ, ಡಾ. ಪ್ರೇಮಿಳಾ ಅಂಬಾರಾಯ, ಡಾ. ಬಸವ ಪಾಟೀಲ್ ಜಾವಳಿ, ಪ್ರಗತಿಪರ ರೈತ ಕಲ್ಯಾಣರಾವ ಪಾಟೀಲ್, ಪ್ರಭಾಕರ ಸಲಗರೆ, ಬಾಬುರಾವ ಮಡ್ಡೆ, ರಮೇಶ ಮಾಡ್ಯಾಳಕರ ಹಾಗೂ ಮಲ್ಲಿನಾಥ ವಚ್ಚೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿಚಾರ ಸಂಕಿರಣದಲ್ಲಿ 500ಕ್ಕೂ ಹೆಚ್ಚು ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಸಮತಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಎ.ವಿ. ಪಾಟೀಲ್ ಪದವಿ ಕಾಲೇಜು ಹಾಗೂ ಮಾದನ ಹಿಪ್ಪರಗಾದ ಶ್ರೀ ಶಿವಲಿಂಗೇಶ್ವರ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರು ಮತ್ತು ಉಪನ್ಯಾಸಕರು ಆಸಕ್ತಿಯಿಂದ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.

ಇಂದ್ರಮ್ಮ ಗಜೇಂದ್ರಗಡ ಕಾರ್ಯಕ್ರಮ ನಿರೂಪಿಸಿದರು. ರಾಮಣ್ಣ ಸುತಾರ ಸ್ವಾಗತಿಸಿದರು. ಡಾ. ಬಬ್ರುವಾಹನ ವಂದಿಸಿದರು.

ಕನ್ನಡ ಭಾಷೆಯ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಡಾ. ಸಂಜೀವಕುಮಾರ್ ಅತಿವಾಳೆ



ಬೀದರ್

ಕನ್ನಡ ಭಾಷೆ, ನಾಡು, ನುಡಿ ಹಾಗೂ ಸಂಸ್ಕೃತಿಯ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಯುವಜನರು ಕನ್ನಡ ಭಾಷೆಯ ಮಹತ್ವ ಅರಿತು ದೈನಂದಿನ ಬದುಕಿನಲ್ಲಿ ಕನ್ನಡಕ್ಕೆ ಆದ್ಯತೆ ನೀಡಬೇಕು. ಭಾಷೆಯ ಮೇಲಿನ ಅಭಿಮಾನ ಕೇವಲ ಮಾತಿಗೆ ಸೀಮಿತವಾಗದೆ, ಅದರ ಬಳಕೆ ಹಾಗೂ ಬೆಳವಣಿಗೆಯ ಮೂಲಕ ವ್ಯಕ್ತವಾಗಬೇಕು ಎಂದು ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ್ ಅತಿವಾಳೆ ಹೇಳಿದರು.

ಬೀದರ್ ನಗರದ ಆದರ್ಶ ಐಟಿಐ ಕಾಲೇಜಿನಲ್ಲಿ ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ವತಿಯಿಂದ ಬುಧವಾರ ಆಯೋಜಿಸಿದ್ದ ಕನ್ನಡ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಭಾಷೆಗೆ ತನ್ನದೇ ಆದ ಶ್ರೀಮಂತ ಇತಿಹಾಸ, ಸಾಹಿತ್ಯಿಕ ಪರಂಪರೆ ಹಾಗೂ ಸಾಂಸ್ಕೃತಿಕ ವೈಭವವಿದೆ. ಇಂತಹ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವಾಗಬೇಕು. ವಿದ್ಯಾರ್ಥಿಗಳು ಕನ್ನಡ ಸಾಹಿತ್ಯ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಕನ್ನಡದ ನೆಲ, ಜಲ, ಭಾಷೆ ಹಾಗೂ ಸಂಸ್ಕೃತಿಯ ಬಗ್ಗೆ ಗೌರವ ಹೊಂದುವುದು ಬಹಳ ಮುಖ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಆತ್ಮನಂದ್ ಬಂಬುಳಗಿ ಮಾತನಾಡಿ, ಕನ್ನಡ ಜಾಗೃತಿ ಎನ್ನುವುದು ಒಂದು ದಿನದ ಕಾರ್ಯಕ್ರಮಕ್ಕೆ ಸೀಮಿತವಾಗಬಾರದು. ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆಯ ಬಗ್ಗೆ ಪ್ರೀತಿ, ಅಭಿಮಾನ ಹಾಗೂ ಗೌರವ ಬೆಳೆಸುವ ನಿರಂತರ ಪ್ರಯತ್ನ ನಡೆಯಬೇಕು. ಕನ್ನಡ ಭಾಷೆಯ ಬಳಕೆ ಹೆಚ್ಚಾದಾಗ ಮಾತ್ರ ಅದರ ಬೆಳವಣಿಗೆ ಸಾಧ್ಯ. ಮನೆ, ಶಾಲೆ, ಕಾಲೇಜು ಹಾಗೂ ಸಾರ್ವಜನಿಕ ಜೀವನದಲ್ಲಿ ಕನ್ನಡಕ್ಕೆ ಆದ್ಯತೆ ನೀಡುವ ಮೂಲಕ ಭಾಷೆಯ ಉಳಿವು ಮತ್ತು ಬೆಳವಣಿಗೆಗೆ ಪ್ರತಿಯೊಬ್ಬರೂ ಕೊಡುಗೆ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಸಾಹಿತಿ ಮಲ್ಲಿಕಾರ್ಜುನ್ ಮುರ್ಕೆ ವಿಶೇಷ ಉಪನ್ಯಾಸ ನೀಡಿ, ವಿದ್ಯಾರ್ಥಿಗಳು ಕನ್ನಡ ಸಾಹಿತ್ಯವನ್ನು ಅಭ್ಯಾಸ ಮಾಡುವುದರೊಂದಿಗೆ ನಾಡಿನ ಇತಿಹಾಸ ಹಾಗೂ ಮಹನೀಯರ ಜೀವನಾದರ್ಶಗಳನ್ನು ತಿಳಿದುಕೊಳ್ಳಬೇಕು. ಭಾಷೆಯ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹಾಗೂ ನಾಡಿನ ಬಗ್ಗೆ ಅಭಿಮಾನ ಬೆಳೆಸಲು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷ ಭೀಮಶಾ ಬಸಲಾಪೂರ್ ಹಿರಿಯ ಕಲಾವಿದೆ ಲಕ್ಷ್ಮೀ ಚಿದ್ರಿ, ಕಾಂಚನಾ, ಪದ್ಮಾವತಿ ಪಾಂಚಾಳ್, ಸಂತೋಷಕುಮಾರ್ ಹಾಗೂ ಲಕ್ಷ್ಮೀಬಾಯಿ ಸೇರಿದಂತೆ ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಕನ್ನಡಾಭಿಮಾನಿಗಳು ಉಪಸ್ಥಿತರಿದ್ದರು. ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಅಧ್ಯಕ್ಷ ಸಂತೋಷಕುಮಾರ್ ಜೋಳದಾಪಕೆ ಸ್ವಾಗತಿಸಿದರು. ವಿಜಯಕುಮಾರ್ ಬ್ಯಾಲಹಳ್ಳಿ ನಿರೂಪಿಸಿದರು. ಶಿಕ್ಷಕಿ ಸುಜಾತಾ ವಂದಿಸಿದರು.

ಒಂದನೇಯ ಪುಟದಿಂದ

ಕೃಷಿ ವಿವಿ ನೇಮಕಾತಿಯಲ್ಲಿ40 ಲಕ್ಷದಿಂದ ₹50 ಲಕ್ಷದವರೆಗೆ ಲಂಚದ ಆರೋಪ: ತನಿಖೆಗೆ ಜೆಡಿಎಸ್ ಆಗ್ರಹ

ಇಬ್ರಾಹಿಂ ಕಲೀಲ್ ತಂದೆ ರಾಜಾ ಸಾಬ್ ಎಂಬುವವರು ಕರ್ನಾಟಕ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ ಎಂದು ವಿರೂಪಾಕ್ಷಿ ತಿಳಿಸಿದರು. ಸಹಾಯಕ ಪ್ರಾಧ್ಯಾಪಕರ ಪರೀಕ್ಷೆಗೆ ಹಾಜರಾಗದಿದ್ದರೂ ₹40 ಲಕ್ಷ ಮುಂಗಡವಾಗಿ ನೀಡಿದರೆ ನೇಮಕಾತಿ ಆದೇಶ ಕೊಡಿಸುವುದಾಗಿ ಹಾಗೂ ನಂತರ ₹10 ಲಕ್ಷ ನೀಡಬೇಕೆಂದು ಬೇಡಿಕೆ ಇಡಲಾಗಿತ್ತು ಎಂಬುದು ದೂರಿನಲ್ಲಿರುವ ಆರೋಪವಾಗಿದೆ. ಈ ಆರೋಪದ ಸತ್ಯಾಸತ್ಯತೆಯನ್ನು ತನಿಖಾ ಸಂಸ್ಥೆಗಳು ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಕುಲಪತಿ ಹನುಮಂತಪ್ಪ, ಆಡಳಿತ ಮಂಡಳಿಯ ಸದಸ್ಯ ಡಿ. ಮಲ್ಲಿಕಾರ್ಜುನ, ಡಾ. ರಾಜಣ್ಣ ಹಾಗೂ ಬೆಂಗಳೂರಿನ ಜಿಕೆವಿಕೆ ಪರೀಕ್ಷಾ ಕೇಂದ್ರದೊಂದಿಗೆ ಸಂಬಂಧ ಹೊಂದಿರುವ ಡಾ. ಸಿದ್ದಯ್ಯ ಅವರ ಪಾತ್ರದ ಬಗ್ಗೆಯೂ ತನಿಖೆ ನಡೆಸಬೇಕು. ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಕಾರ ದುರುಪಯೋಗವಾಗಿದೆಯೇ ಎಂಬುದನ್ನು ಪರಿಶೀಲಿಸಿ, ತಪ್ಪಿತಸ್ಥರು ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ನೇಮಕಾತಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಸಂಪೂರ್ಣ ಪಟ್ಟಿ, ಅರ್ಹ ಮತ್ತು ಅನರ್ಹ ಅಭ್ಯರ್ಥಿಗಳ ವಿವರ, ಪರೀಕ್ಷಾ ಕೇಂದ್ರಗಳ ಹಂಚಿಕೆ ಹಾಗೂ ಬದಲಾವಣೆಗೆ ಸಂಬಂಧಿಸಿದ ಆದೇಶಗಳು, ಅಧಿಕಾರಿಗಳ ಶಿಫಾರಸು ಪತ್ರಗಳು, ಪರೀಕ್ಷಾ ಮೇಲ್ವಿಚಾರಕರ ಮಾಹಿತಿ, ಪ್ರಶ್ನೆಪತ್ರಿಕೆಗಳು, ಒಎಂಆರ್ ಉತ್ತರ ಪತ್ರಿಕೆಗಳು, ಹಾಜರಾತಿ ದಾಖಲೆಗಳು ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ತನಿಖೆಗೆ ಒಳಪಡಿಸಬೇಕು ಎಂದು ಹೇಳಿದರು.

ಅಲ್ಲದೆ, ಅಭ್ಯರ್ಥಿಗಳ ಲಿಖಿತ ಪರೀಕ್ಷೆಯ ಅಂಕಗಳು, ಸಂದರ್ಶನದ ಅಂಕಪಟ್ಟಿ, ಸ್ಕೋರ್ ಕಾರ್ಡ್, ಆಯ್ಕೆ ಸಮಿತಿಯ ನಡಾವಳಿಗಳು, ಅಂತಿಮ ಆಯ್ಕೆ ಪಟ್ಟಿ, ನಿರೀಕ್ಷಣಾ ಪಟ್ಟಿ, ಪ್ರಮಾಣಪತ್ರ ಪರಿಶೀಲನೆ ದಾಖಲೆಗಳು, ನೇಮಕಾತಿ ಆದೇಶಗಳು ಹಾಗೂ ಆಡಳಿತ ಮಂಡಳಿ ಸಭೆಯ ನಿರ್ಣಯಗಳನ್ನು ಪರಿಶೀಲಿಸಬೇಕು. ಪ್ರತಿಯೊಬ್ಬ ಆಯ್ಕೆಯಾದ ಅಭ್ಯರ್ಥಿಯ ಅರ್ಹತೆ ಮತ್ತು ಪಡೆದ ಅಂಕಗಳ ಆಧಾರದಲ್ಲಿ ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆದಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಾಮಾನ್ಯ ವರ್ಗ ಹಾಗೂ ವಿವಿಧ ಹಿಂದುಳಿದ ವರ್ಗಗಳ ಮೀಸಲಾತಿಯ ಜೊತೆಗೆ ಕಲ್ಯಾಣ ಕರ್ನಾಟಕ ಪ್ರದೇಶದ ಮೀಸಲಾತಿ, ಗ್ರಾಮೀಣ, ಮಹಿಳಾ, ಕನ್ನಡ ಮಾಧ್ಯಮ ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ ಅನ್ವಯವಾಗುವ ಸಮತಲ ಮೀಸಲಾತಿ ನಿಯಮಗಳನ್ನು ಸಮರ್ಪಕವಾಗಿ ಪಾಲಿಸಲಾಗಿದೆಯೇ ಎಂಬುದನ್ನೂ ತನಿಖೆ ನಡೆಸಬೇಕು. ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗಿದ್ದರೆ ಅದನ್ನು ಸರಿಪಡಿಸಿ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಈ ನೇಮಕಾತಿ ಪ್ರಕ್ರಿಯೆಯಲ್ಲಿನ ಅಕ್ರಮಗಳ ಕುರಿತು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಡಬ್ಲ್ಯು.ಪಿ. ಸಂಖ್ಯೆ 4019/2026 (--) ಅಡಿಯಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ ಎಂದು ತಿಳಿಸಿದ ಅವರು, ಪ್ರಕರಣ ನ್ಯಾಯಾಂಗದ ಗಮನಕ್ಕೂ ಬಂದಿರುವ ಹಿನ್ನೆಲೆಯಲ್ಲಿ ಸರ್ಕಾರ ಗಂಭೀರವಾಗಿ ಪರಿಗಣಿಸಿ ತನಿಖೆಗೆ ಮುಂದಾಗಬೇಕು ಎಂದರು.

ಆರೋಪಗಳಿಗೆ ಸಂಬಂಧಿಸಿದ ಅಧಿಕಾರಿಗಳು ವಿಶ್ವವಿದ್ಯಾಲಯದ ಉನ್ನತ ಹುದ್ದೆಗಳಲ್ಲಿ ಹಾಗೂ ಆಡಳಿತ ವ್ಯವಸ್ಥೆಯಲ್ಲಿ ಪ್ರಭಾವ ಹೊಂದಿರುವುದರಿಂದ ತನಿಖೆಯ ಮೇಲೆ ಯಾವುದೇ ಒತ್ತಡ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದರೆ ಸಂಬಂಧಪಟ್ಟ ಅಧಿಕಾರಿಗಳನ್ನು ತನಿಖೆ ಪೂರ್ಣಗೊಳ್ಳುವವರೆಗೆ ಕರ್ತವ್ಯದಿಂದ ದೂರವಿಟ್ಟು, ದಾಖಲೆಗಳನ್ನು ಸುರಕ್ಷಿತವಾಗಿ ವಶಕ್ಕೆ ಪಡೆಯಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಲೋಕಾಯುಕ್ತ, ಸ್ವತಂತ್ರ ಉನ್ನತ ಮಟ್ಟದ ತನಿಖಾ ಸಂಸ್ಥೆ ಅಥವಾ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಸಬೇಕು. ಆರೋಪಗಳು ಸಾಬೀತಾದಲ್ಲಿ ಸಂಬಂಧಪಟ್ಟವರ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಕ್ರಿಮಿನಲ್ ಪ್ರಕರಣ ದಾಖಲಿಸಿ, ನಿಯಮಬಾಹಿರ ನೇಮಕಾತಿಗಳನ್ನು ರದ್ದುಗೊಳಿಸಬೇಕು. ಅರ್ಹತೆ ಮತ್ತು ಪ್ರತಿಭೆಯ ಆಧಾರದಲ್ಲಿ ಉದ್ಯೋಗದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ವಿರೂಪಾಕ್ಷಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ, ವಿಕ್ರಂ ಗೋಸ್ವಾಮಿ, ಆದಿ ರೈ, ಎ. ರಾಮು, ಶರಣಪ್ಪಗೌಡ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

ವಾರ್ಡ್ ನಂ.31: ಪರಿಶಿಷ್ಟ ಜಾತಿಗೆ ಮೀಸಲಾತಿ ನೀಡಲು ಒತ್ತಾಯ

ಅನುಕೂಲ ಆಗುತ್ತದೆ ಎಂದರು. ಈ ಸಂಬಂಧ ಮೀಸಲಾತಿ ಹಂಚಿಕೆಯ ವಿಷಯವನ್ನು ಮತ್ತೊಮ್ಮೆ ಕೂಲಂಕುಶವಾಗಿ ಪರಿಶೀಲಿಸಿ, ವಾರ್ಡ್ ನಂ. 31 ರಲ್ಲಿ ಪರಿಶಿಷ್ಟ ಜಾತಿಯ ಅಭ್ಯರ್ಥಿಗೆ ಮೀಸಲಿಡಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಎಸ್. ವೆಂಕಟಸ್ವಾಮಿ, ಉರುಕುಂದಿ, ಸಿಯತಲಾಬ್,ಭೀಮೇಶ,ರಘು ಸೇರಿದಂತೆ ಉಪಸ್ಥಿತರಿದ್ದರು.

ಅಕ್ಟೋಬರ್ 28ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆ

ದೃಢೀಕರಣಕ್ಕೆ ಆಧಾರ್ ಕಾರ್ಡ್, ಗುರುತಿನ ಚೀಟಿ ಅಥವಾ ಜನ್ಮ ದಿನಾಂಕ ಇರುವ ಸರಕಾರಿ ಪ್ರಮಾಣ ಪತ್ರವನ್ನು ಹಾಗೂ ಸ್ವಯಂ ಬ್ಯಾಂಕ್ ಖಾತೆಯ ಝುರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸುವುದು. ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಸ್ಪರ್ಧಾಳುಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾಧಿಕಾರಿಗಳು, ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ವಿರೇಶ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಡುಗೆ, ಸ್ವಚ್ಛತೆ ಸಿಬ್ಬಂದಿಗಳಿಗೆ ತರಬೇತಿ ಕಾರ್ಯಾಗಾರ

ನಿರ್ವಹಣೆಗಾಗಿ ಅಧಿಕಾರಿಗಳು ನೀಡಿರುವ ಈ ಕಟ್ಟುನಿಟ್ಟಿನ ಸೂಚನೆಗಳನ್ನು ಎಲ್ಲ ಸಿಬ್ಬಂದಿ ಕಡ್ಡಾಯವಾಗಿ ಪಾಲಿಸಬೇಕಿದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಶರಣಬಸವ ಅವರು ಮಾತನಾಡಿ, ವಿದ್ಯಾರ್ಥಿ ನಿಲಯಗಳಲ್ಲಿ ಊಟ ತಯಾರಿಸುವಾಗ ಹಾಗೂ ವಿತರಿಸುವಾಗ ನಿರ್ಲಕ್ಷ್ಯ ತೋರಲಾಗುತ್ತಿದ್ದು, ನಿಗದಿತ ವೇಳೆಗೆ ಊಟ ಸಿಗದೆ ಮಕ್ಕಳಿಗೆ ತೊಂದರೆಯಾಗುತ್ತದೆ ಎಂಬ ದೂರುಗಳು ಬಂದಿದ್ದು, ಅಡುಗೆ ಮನೆ ಹಾಗೂ ಹಾಸ್ಟೆಲ್ ಆವರಣದಲ್ಲಿ ನೈರ್ಮಲ್ಯ ಮತ್ತು ಸ್ವಚ್ಛತೆಯನ್ನು ಕಾಪಾಡಬೇಕು. ಯಾವುದೇ ಕಾರಣಕ್ಕೂ ಅಡುಗೆ ಸಿಬ್ಬಂದಿ ಅಥವಾ ವಾರ್ಡನ್‌ಗಳು ಕರ್ತವ್ಯದಲ್ಲಿ ಬೇಜವಾಬ್ದಾರಿ ತೋರಬಾರದು. ಅಲ್ಲದೆ ಕೆಲವು ತಪ್ಪುಗಳು ಮರುಕಳಿಸಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದರು.

ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಹಾಗೂ ಕಟ್ಟುನಿಟ್ಟಿನ ಸ್ವಚ್ಛತೆಯನ್ನು ಕಾಪಾಡುವಂತೆ ಹೇಳಿದರು.

ಇದಕ್ಕೂ ಮುಂಚೆ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್., ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ವ್ಯವಸ್ಥಾಪಕ ತಿಮ್ಮರೆಡ್ಡಿ ಸೇರಿದಂತೆ ವಿವಿಧ ವಸತಿ ಶಾಲೆಯ ಪ್ರಾಂಶುಪಾಲರು, ನಿಲಯ ಪಾಲಕರು, ಅಡುಗೆ ಸಿಬ್ಬಂದಿಗಳು, ಸಹಾಯಕರು ಇದ್ದರು.

ರಾಯಚೂರಿನಲ್ಲಿ ನಿಲ್ಲದ ರೈತರ ಆತ್ಮಹತ್ಯೆ ಸರಣಿ, ಪರಿಹಾರ ವಿತರಣೆಯ ಅಂಕಿ-ಅಂಶಗಳಲ್ಲೇ ಗೊಂದಲ!

ರೈತ ಮೃತಪಟ್ಟಾಗ ಪ್ರತಿಭಟನೆ ನಡೆಸಿದರೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ತಾತ್ಕಾಲಿಕ ಭರವಸೆಗಳನ್ನು ನೀಡುತ್ತಾರೆ. ಆದರೆ ಅಂತ್ಯಕ್ರಿಯೆ ಮುಗಿದ ಬಳಿಕ ಕುಟುಂಬದ ಸಂಕಷ್ಟಗಳನ್ನು ವಿಚಾರಿಸುವವರೇ ಇರುವುದಿಲ್ಲ. ರೈತನ ಸಾವಿನೊಂದಿಗೆ ಕುಟುಂಬದ ಸಮಸ್ಯೆಗಳು ಮುಗಿಯುವುದಿಲ್ಲ. ಬದಲಾಗಿ, ಸಾಲದ ಹೊರೆ, ಮಕ್ಕಳ ಶಿಕ್ಷಣ, ಕುಟುಂಬದ ನಿರ್ವಹಣೆ ಮತ್ತು ಮುಂದಿನ ಜೀವನದ ಅನಿಶ್ಚಿತತೆ ಇನ್ನಷ್ಟು ತೀವ್ರವಾಗುತ್ತದೆ. ಇಂತಹ ಕುಟುಂಬಗಳಿಗೆ ಪರಿಹಾರದ ಜೊತೆಗೆ ನಿರಂತರ ಆರ್ಥಿಕ ಹಾಗೂ ಸಾಮಾಜಿಕ ನೆರವು ಒದಗಿಸುವ ವ್ಯವಸ್ಥೆ ರೂಪುಗೊಳ್ಳಬೇಕಿದೆ.

ಮಳೆಯ ಅನಿಶ್ಚಿತತೆ, ಬರಗಾಲ, ಬೆಳೆ ನಷ್ಟ, ಕೃಷಿ ಉತ್ಪಾದನಾ ವೆಚ್ಚದ ಹೆಚ್ಚಳ, ಕೃಷಿ ಸಾಲದ ಹೊರೆ ಮತ್ತು ಬೆಳೆದ ಬೆಳೆಗೆ ಸೂಕ್ತ ಬೆಲೆ ದೊರೆಯದಿರುವುದು ರೈತರು ಎದುರಿಸುತ್ತಿರುವ ಪ್ರಮುಖ ಸವಾಲುಗಳಾಗಿವೆ. ಬೀಜ, ರಸಗೊಬ್ಬರ, ಕೀಟನಾಶಕ, ಕೂಲಿ ಮತ್ತು ನೀರಾವರಿ ವೆಚ್ಚಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ, ಮಾರುಕಟ್ಟೆಯಲ್ಲಿ ನಿರೀಕ್ಷಿತ ಬೆಲೆ ಸಿಗದಿದ್ದರೆ ರೈತರು ಸಾಲದ ಸುಳಿಗೆ ಸಿಲುಕುವ ಅಪಾಯ ಹೆಚ್ಚುತ್ತದೆ.

ಬೆಳೆ ವಿಮೆ ಮತ್ತು ಬೆಳೆ ನಷ್ಟದ ಪರಿಹಾರ ಸಕಾಲದಲ್ಲಿ ದೊರೆಯದಿರುವುದು ಸಮಸ್ಯೆಯನ್ನು ಮತ್ತಷ್ಟು ಗಂಭೀರಗೊಳಿಸುತ್ತದೆ. ಕೃಷಿ ಸಾಲ ಮರುಪಾವತಿಗೆ ಸಮಯಾವಕಾಶ ಹಾಗೂ ಸಂಕಷ್ಟದಲ್ಲಿರುವ ರೈತರಿಗೆ ತುರ್ತು ನೆರವು ದೊರೆಯದಿದ್ದರೆ, ಕುಟುಂಬಗಳು ತೀವ್ರ ಆರ್ಥಿಕ ಒತ್ತಡವನ್ನು ಎದುರಿಸಬೇಕಾಗುತ್ತದೆ. ರೈತರು ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡು ನಿರಂತರವಾಗಿ ದುಡಿಯುತ್ತಿದ್ದರೂ, ಪ್ರಕೃತಿಯ ಅನಿಶ್ಚಿತತೆ ಮತ್ತು ಮಾರುಕಟ್ಟೆಯ ಏರಿಳಿತಗಳ ನಡುವೆ ಅವರ ಆದಾಯಕ್ಕೆ ಭದ್ರತೆ ಇಲ್ಲದಿರುವುದು ಮೂಲ ಸಮಸ್ಯೆಯಾಗಿದೆ.

ಅರ್ಹ ಕುಟುಂಬಗಳಿಗೆ ನೆರವು ತಲುಪಿದೆಯೇ?

ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಅರ್ಹತೆ ನಿರ್ಧರಿಸುವ ಮಾನದಂಡಗಳು, ತನಿಖೆಯ ಪ್ರಕ್ರಿಯೆ ಮತ್ತು ಪರಿಹಾರ ವಿತರಣೆಯ ಸ್ಥಿತಿಗತಿಗಳ ಕುರಿತು ಸಾರ್ವಜನಿಕರಿಗೆ ಸ್ಪಷ್ಟ ಮಾಹಿತಿ ದೊರೆಯಬೇಕಿದೆ. ಅರ್ಹವೆಂದು ಗುರುತಿಸಲ್ಪಟ್ಟ ಕುಟುಂಬಗಳಿಗೆ ಪರಿಹಾರದ ಸಂಪೂರ್ಣ ಮೊತ್ತ ತಲುಪಿದೆಯೇ? ಪರಿಹಾರಕ್ಕಾಗಿ ಕಾಯುತ್ತಿರುವ ಕುಟುಂಬಗಳು ಎಷ್ಟು? ತಿರಸ್ಕೃತ ಪ್ರಕರಣಗಳ ಮರುಪರಿಶೀಲನೆ ನಡೆದಿದೆಯೇ? ಪರಿಹಾರ ವಿತರಣೆಯ ಅಂಕಿ-ಅಂಶಗಳಲ್ಲಿ ಕಂಡುಬರುವ ವ್ಯತ್ಯಾಸಕ್ಕೆ ಕಾರಣವೇನು? ಎಂಬ ಪ್ರಶ್ನೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಉತ್ತರಿಸಬೇಕಿದೆ.

ಪ್ರತಿ ಟನ್ ಕಬ್ಬಿಗೆ 5,500 ರೂ. ಬೆಲೆ ನಿಗದಿಪಡಿಸಲು ಆಗ್ರಹ



ಕಲಬುರಗಿ:

ಡಾ. ಎಂ.ಎಸ್. ಸ್ವಾಮಿನಾಥನ್ ಆಯೋಗದ ಶಿಫಾರಸಿನಂತೆ ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನಿಗದಿಪಡಿಸಬೇಕು ಹಾಗೂ ಪ್ರತಿ ಟನ್ ಕಬ್ಬಿಗೆ 5,500 ರೂ. ಬೆಲೆ ನೀಡಬೇಕು ಎಂಬುದು ಸೇರಿದಂತೆ ಕಬ್ಬು ಬೆಳೆಗಾರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ವತಿಯಿಂದ ನಡೆಯುತ್ತಿರುವ ಧರಣಿ ಸತ್ಯಾಗ್ರಹ ಗುರುವಾರ ಎರಡನೇ ದಿನಕ್ಕೆ ಕಾಲಿಟ್ಟಿತು.

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತರು ಬುಧವಾರ ಬೆಳಗ್ಗೆ ನಗರದ ಹುಮನಾಬಾದ್ ರಿಂಗ್ ರಸ್ತೆಯನ್ನು ತಡೆದು ಬೃಹತ್ ಪ್ರತಿಭಟನೆ ನಡೆಸಿದರು. ಇದರಿಂದ ಭಾರಿ ವಾಹನಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಿ, ಸುಮಾರು ಎರಡು-ಮೂರು ಕಿ.ಮೀ. ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಉಂಟಾಯಿತು.

ಇನ್ನೊಂದೆಡೆ, ನಗರದ ಜೇವರ್ಗಿ ರಸ್ತೆಯ ವಾಲ್ಮೀಕಿ ಮಹರ್ಷಿ ವೃತ್ತದಲ್ಲಿ ನಡೆಯುತ್ತಿರುವ ಅಹೋರಾತ್ರಿ ಧರಣಿಯೂ ಬುಧವಾರ ಮುಂದುವರಿಯಿತು. ದಿನವಿಡೀ ವಿವಿಧ ಸಂಘಟನೆಗಳ ಮುಖಂಡರು ಧರಣಿಗೆ ಬೆಂಬಲ ವ್ಯಕ್ತಪಡಿಸಿದರು.

ಡಾ. ಎಂ.ಎಸ್. ಸ್ವಾಮಿನಾಥನ್ ಆಯೋಗದ ವರದಿಯಂತೆ ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನಿಗದಿಪಡಿಸಬೇಕು. ಸಕ್ಕರೆಯ ಇಳುವರಿಯನ್ನು ಆಧಾರವಾಗಿಟ್ಟುಕೊಂಡು ಪ್ರತಿ ಟನ್ ಕಬ್ಬಿಗೆ ₹5,500 ಬೆಲೆ ನಿಗದಿಪಡಿಸಬೇಕು. ಕಬ್ಬು ಕಟಾವನ್ನು 12 ತಿಂಗಳೊಳಗೆ ಪೂರ್ಣಗೊಳಿಸಲು ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ರೈತರು ಆಗ್ರಹಿಸಿದರು.

ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬಿನಿಂದ ಉತ್ಪಾದನೆಯಾಗುವ ಮೊಲಾಸಸ್, ಕಾಕಂಬಿ, ಎಥನಾಲ್, ಡಿಸ್ಟಿಲರಿ ಉತ್ಪನ್ನಗಳು, ಸಹ ವಿದ್ಯುತ್, ಬಯೋ ಕಾಂಪೋಸ್ಟ್, ಪಶು ಆಹಾರ ಹಾಗೂ ಬಗಾಸ್ ಸೇರಿದಂತೆ ವಿವಿಧ ಉಪಉತ್ಪನ್ನಗಳಿಂದ ದೊರೆಯುವ ಲಾಭದಲ್ಲಿ ರೈತರಿಗೆ ಶೇ. 50ರಷ್ಟು ಪಾಲು ನೀಡಬೇಕು ಎಂದು ಒತ್ತಾಯಿಸಿದರು. ಕಬ್ಬು ಕಟಾವು ಮತ್ತು ಸಾಗಣೆ ವೆಚ್ಚಕ್ಕೆ ಸಂಬಂಧಿಸಿದಂತೆ ಸಕ್ಕರೆ ಕಾರ್ಖಾನೆಗಳು ಹಾಗೂ ಕಬ್ಬು ಬೆಳೆಗಾರರ ನಡುವೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳಲು ಸಮಿತಿ ರಚಿಸಬೇಕು. ಈ ಪ್ರಕ್ರಿಯೆಯಲ್ಲಿ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.


ಕರ್ನಾಟಕ ಕಬ್ಬು ಖರೀದಿ ಮತ್ತು ಸರಬರಾಜು ನಿಯಂತ್ರಣ ಅಧಿನಿಯಮ, 2013 ಹಾಗೂ ತಿದ್ದುಪಡಿ ಅಧಿನಿಯಮ, 2014ರ ಕಲಂ 4(ಎ)ರಡಿ ಇರುವ ಅವಕಾಶವನ್ನು ಬಳಸಿಕೊಂಡು, ಕೇಂದ್ರ ಸರ್ಕಾರ ನಿಗದಿಪಡಿಸುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್‌ಆರ್‌ಪಿ) ಜೊತೆಗೆ ರಾಜ್ಯ ಸರ್ಕಾರವೂ ಹೆಚ್ಚುವರಿ ಬೆಲೆ ನಿಗದಿಪಡಿಸಬೇಕು ಎಂದು ರೈತರು ಆಗ್ರಹಿಸಿದರು.

ಕಬ್ಬಿನ ತೂಕದಲ್ಲಿ ನಡೆಯುತ್ತಿರುವ ವಂಚನೆಯನ್ನು ತಡೆಯಲು ಅಳತೆ ಮತ್ತು ತೂಕ ಮಾಪನ ಇಲಾಖೆಯ ಅಧಿಕಾರಿಗಳು ಸಕ್ಕರೆ ಕಾರ್ಖಾನೆಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕಾರ್ಖಾನೆಗಳ ಮುಖ್ಯದ್ವಾರದಲ್ಲಿ ವೇಬ್ರಿಡ್ಜ್ ಅಳವಡಿಸಿ, ಎತ್ತಿನ ಬಂಡಿ, ಟ್ರ್ಯಾಕ್ಟರ್ ಹಾಗೂ ಲಾರಿಗಳಲ್ಲಿ ಸಾಗಿಸುವ ಕಬ್ಬನ್ನು ರೈತರ ಸಮ್ಮುಖದಲ್ಲಿಯೇ ತೂಕ ಮಾಡಬೇಕು. ಸರ್ಕಾರಿ ಎಪಿಎಂಸಿ ಕೇಂದ್ರಗಳಲ್ಲಿಯೂ ವೇಬ್ರಿಡ್ಜ್ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಬ್ಬು ಸಾಗಿಸುವ ಟ್ರ್ಯಾಕ್ಟರ್ ಹಾಗೂ ಲಾರಿಗಳಿಂದ ಟೋಲ್ ಗೇಟ್ ಗಳಲ್ಲಿ ಶುಲ್ಕ ವಸೂಲಿ ಮಾಡುವುದನ್ನು ಕೈಬಿಡಬೇಕು. ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಸರ್ಕಾರ ಸಮಗ್ರ ನೀತಿ ರೂಪಿಸಿ, ರೈತರ ಎಲ್ಲ ಬೇಡಿಕೆಗಳನ್ನು ಈಡೇರಿಸಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮ ಪ್ರಭು ಪಾಟೀಲ, ಅಂದೋಲಾ ಶ್ರೀ ಹಾಗೂ ಪಾಳಾ ಶ್ರೀ ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು. ರೈತ ಮುಖಂಡರಾದ ಶರಣಬಸಪ್ಪ ಮಮಶೆಟ್ಟಿ, ಸಿದ್ದರಾಮ ದನ್ನೂರ್ ಜಗದೀಶ್ ಪಾಟೀಲ್, ಕರೆಪ್ಪ ಕರಗೊಂಡ, ಸಿದ್ದು ಎಸ್.ಎಲ್., ವೀರಣ್ಣ ಗಂಗಾಣಿ, ಉಮಾಪತಿ ಪಾಟೀಲ್, ರಮೇಶ್ ಹೂಗಾರ್ ಸಿದ್ದು ಕಲಶೆಟ್ಟಿ, ಚೇತನ್ ಪಾಟೀಲ್, ಮಲ್ಲಿಕಾರ್ಜುನ್ ಪಾಟೀಲ್ ಸೇರಿದಂತೆ ಹಲವು ರೈತ ಮುಖಂಡರು ಹಾಗೂ ರೈತರು ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಯುವತಿ ಗುರುದೇವಿ ಸರಡಗಿ ಅವರು ಬೇಡಿಕೆಗಳು ಈಡೇರುವವರೆಗೆ ಬುಧವಾರ ಬೆಳಗ್ಗೆಯಿಂದ ಉಪವಾಸ ಸತ್ಯಾಗ್ರಹ ಆರಂಭಿಸಿದ್ದಾರೆ.

ಅಂಬೇಡ್ಕರ್ ಅವರ 22 ಪ್ರತಿಜ್ಞೆಗಳು ಬದುಕಿಗೆ ಹೊಸ ದಿಕ್ಕು ನೀಡಿವೆ : ಭಂತೆ ಬೋಧಿತಿಸ್ಸ



ಕಲಬುರಗಿ:

ಬಾಬಾಸಾಹೇಬ ಡಾ. ಬಿ.ಆರ್. ಅಂಬೇಡ್ಕರ್ ಅವರು 1956ರಲ್ಲಿ ಬೌದ್ಧ ಧಮ್ಮ ಸ್ವೀಕರಿಸುವ ಮೂಲಕ ನಮಗೆ ಧಮ್ಮದ ಮಾರ್ಗ ತೋರಿಸಿದ್ದಾರೆ. ಅವರು ಬೋಧಿಸಿದ 22 ಪ್ರತಿಜ್ಞೆಗಳು ಹಾಗೂ ಬುದ್ಧ, ಧಮ್ಮ ಮತ್ತು ಸಂಘ ಎಂಬ ತ್ರಿರತ್ನಗಳು ನಮ್ಮ ಬದುಕಿಗೆ ಹೊಸ ದಿಕ್ಕು ನೀಡಿವೆ. ಈ ತ್ರಿರತ್ನಗಳ ಮೂಲಕ ನಾವೆಲ್ಲರೂ ಆಗರ್ಭ ಶ್ರೀಮಂತರಾಗಿದ್ದೇವೆ ಎಂದು ಭಂತೆ ಬೋಧಿತಿಸ್ಸ ಹೇಳಿದರು.

ನಗರದ ಬಸವನಗರದಲ್ಲಿ 70ನೇ ಧಮ್ಮ ಚಕ್ರ ಪ್ರವರ್ತನಾ ದಿನದ ನಿಮಿತ್ತ ರಾಹುಲ್ ಯುವಕ ಸಂಘದ ವತಿಯಿಂದ ಆಯೋಜಿಸಿದ್ದ ಧಮ್ಮ ಜ್ಯೋತಿ ಯಾತ್ರೆಯ ಬಳಿಕ, ಬಸವನಗರದ ಕರುಣಾ ಬುದ್ಧ ವಿಹಾರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಾಬಾಸಾಹೇಬ ಅಂಬೇಡ್ಕರ್ ಅವರು ಬೌದ್ಧ ಧಮ್ಮ ಸ್ವೀಕರಿಸುವ ಮೂಲಕ ಸಮಾನತೆ, ಸ್ವಾಭಿಮಾನ ಹಾಗೂ ಮಾನವೀಯ ಮೌಲ್ಯಗಳ ಮಹತ್ವವನ್ನು ಸಾರಿದ್ದಾರೆ. ಅವರು ನೀಡಿದ 22 ಪ್ರತಿಜ್ಞೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಬುದ್ಧನ ತತ್ವಗಳಂತೆ ಬದುಕಬೇಕು. ಧಮ್ಮದ ಮಾರ್ಗದಲ್ಲಿ ಸಾಗುವ ಮೂಲಕ ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ಸಮಾನತೆಯನ್ನು ಬೆಳೆಸಬೇಕು ಎಂದು ಭಂತೆ ಬೋಧಿತಿಸ್ಸ ಸಂದೇಶ ನೀಡಿದರು.

ಇದಕ್ಕೂ ಮುನ್ನ ನಗರದ ಜಗತ್ ವೃತ್ತದಲ್ಲಿ ಕಲಬುರಗಿ ನಗರ ಪೊಲೀಸ್ ಆಯುಕ್ತ ಶರಣಪ್ಪ ಎಸ್.ಡಿ. ಅವರು ಧಮ್ಮ ಜ್ಯೋತಿ ಯಾತ್ರೆಗೆ ಚಾಲನೆ ನೀಡಿದರು. ಪಂಚಶೀಲ ಧ್ವಜಗಳನ್ನು ಹಿಡಿದ ಯುವಕರು ಜೈ ಭೀಮ್, ಜೈ ಬುದ್ಧ ಎಂಬ ಘೋಷಣೆಗಳನ್ನು ಮೊಳಗಿಸುತ್ತ ನಗರದ ಪ್ರಮುಖ ಬೀದಿಗಳಲ್ಲಿ ಯಾತ್ರೆ ನಡೆಸಿದರು. ಬಳಿಕ ಯಾತ್ರೆಯು ಬಸವನಗರದ ಕರುಣಾ ಬುದ್ಧ ವಿಹಾರವನ್ನು ತಲುಪಿತು.

ಕಾರ್ಯಕ್ರಮದ ಆರಂಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು. ನಂತರ ಭಂತೆ ಬೋಧಿತಿಸ್ಸ ಅವರು ತ್ರಿಸರಣ ಮತ್ತು ಪಂಚಶೀಲ ಬೋಧಿಸಿದರು. ಹಣಮಂತ ಬೋಧನಕರ ಅವರು ಬಾಬಾಸಾಹೇಬರು ನೀಡಿದ 22 ಪ್ರತಿಜ್ಞೆಗಳನ್ನು ಬೋಧಿಸಿದರು.

ಜಿಲ್ಲೆಯ ವಿವಿಧ ತಾಲೂಕುಗಳು ಹಾಗೂ ನಗರ ಪ್ರದೇಶಗಳಿಂದ ಆಗಮಿಸಿದ್ದ ಬೌದ್ಧ ಅನುಯಾಯಿಗಳು, ಬಸವನಗರದ ಮಹಿಳೆಯರು ಸೇರಿದಂತೆ ನೂರಾರು ಜನರು ಯಾತ್ರೆಯಲ್ಲಿ ಭಾಗವಹಿಸಿ ಧಮ್ಮದ ಸಂದೇಶ ಸಾರಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಮಲ್ಲಿಕಾರ್ಜುನ ಸುಹಾಸಿನಿ, ರಾಜಶೇಖರ ಮಾಂಗ್, ಸಂಧ್ಯಾ ಕಾಣೇಕರ, ಸೂರ್ಯಕಾಂತ ನಿಂಬಾಳ್ಕರ್ ಸಿದ್ದರಾಮ ಬೇಳಕೋಟಿ, ದೇವೇಂದ್ರ ಸಿನ್ನೂರ, ಹರಿಯಪ್ಪ ಹಳ್ಳಿ, ವಿಜಯಕುಮಾರ ಶಿಂಧೆ, ಭೀಮಾ ಕಟ್ಟಿ, ಜಯಪ್ಪ ಕೊಳ್ಳೂರ, ಎಸ್.ಎಸ್. ತವಡೆ ಹಾಗೂ ಸುರೇಶ ಕಾಣೇಕರ ಸೇರಿದಂತೆ ನಗರದ ಪ್ರಮುಖರು ಉಪಸ್ಥಿತರಿದ್ದರು.



ನವರಾತ್ರಿ ಉತ್ಸವದ ಅಂಗವಾಗಿ ರಕ್ತದಾನ ಶಿಬಿರ: 31ಕ್ಕೂ ಹೆಚ್ಚು ಯುವಕರಿಂದ ರಕ್ತದಾನ

ಬೀದರ್,

ಜೈ ಶ್ರೀರಾಮ್ ಚಾರಿಟೇಬಲ್ ಎಜುಕೇಶನ್ ಸೊಸೈಟಿ ವತಿಯಿಂದ ನವರಾತ್ರಿ ಉತ್ಸವದ ಅಂಗವಾಗಿ ನಗರದ ವಿದ್ಯಾನಗರ ಬಡಾವಣೆಯ ಶ್ರೀರಾಮ್ ದರ್ಬಾರ್ ಮಂದಿರದ ಆವರಣದಲ್ಲಿ ಬುಧವಾರ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕಲಬುರಗಿ ಬ್ಲಡ್ ಸೆಂಟರ್ ಸಹಯೋಗದಲ್ಲಿ ನಡೆದ ಈ ಶಿಬಿರದಲ್ಲಿ 31ಕ್ಕೂ ಹೆಚ್ಚು ಯುವಕರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ಮಾನವೀಯತೆ ಮೆರೆದರು. ರಕ್ತದಾನ ಮಹಾದಾನವಾಗಿದ್ದು, ಅಗತ್ಯವಿರುವ ರೋಗಿಗಳ ಜೀವ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ರಕ್ತದ ಕೊರತೆಯಿಂದ ಯಾವುದೇ ರೋಗಿಯ ಚಿಕಿತ್ಸೆ ಗೆ ತೊಂದರೆಯಾಗಬಾರದು ಎಂಬ ಸದುದ್ದೇಶದಿಂದ ಆಯೋಜಿಸಲಾದ ಈ ಶಿಬಿರವು ಸಮಾಜದಲ್ಲಿ ಸೇವಾ ಮನೋಭಾವವನ್ನು ಉತ್ತೇಜಿಸಿತು.

ಈ ಸಂದರ್ಭದಲ್ಲಿ ಸೊಸೈಟಿಯ ಉಪಾಧ್ಯಕ್ಷ ಶ್ರೀಕಾಂತ್ ಪಾಟೀಲ್ ಮಾತನಾಡಿ, ದೇಶದ ಯುವಕರು ತಮ್ಮ ವೈಯಕ್ತಿಕ ಜೀವನಕ್ಕೆ ಮಾತ್ರ ಸೀಮಿತವಾಗದೆ, ಸಮಾಜದ ಒಳಿತಿಗಾಗಿ ಹಾಗೂ ದೇಶದ ಅಭಿವೃದ್ಧಿಗಾಗಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು ಎಂದರು.

ರಕ್ತದಾನವು ಕೇವಲ ರಕ್ತ ನೀಡುವ ಕಾರ್ಯವಲ್ಲ; ಅದು ಮತ್ತೊಬ್ಬರ ಬದುಕಿನಲ್ಲಿ ಆಶಾಕಿರಣ ಮೂಡಿಸುವ ಮಹತ್ಕಾರ್ಯವಾಗಿದೆ. ನಾವು ನೀಡುವ ರಕ್ತವು ಅಪಘಾತದಲ್ಲಿ ಗಾಯಗೊಂಡವರು, ಶಸ್ತ್ರಚಿಕಿತ್ಸೆ ಗೆ ಒಳಗಾಗುವವರು ಹಾಗೂ ವಿವಿಧ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳ ಜೀವ ಉಳಿಸಲು ನೆರವಾಗುತ್ತದೆ. ಆದ್ದರಿಂದ ಆರೋಗ್ಯವಂತ ಯುವಕರು ವೈದ್ಯಕೀಯ ಮಾರ್ಗಸೂಚಿಗಳ ಅನುಸಾರ ನಿಯಮಿತವಾಗಿ ರಕ್ತದಾನ ಮಾಡಲು ಮುಂದೆ ಬರಬೇಕು. ರಕ್ತದಾನದಿಂದ ತೊಂದರೆಯಾಗುತ್ತದೆ ಎಂಬ ಅನಗತ್ಯ ಭಯವನ್ನು ಬದಿಗಿಟ್ಟು, ಮಾನವೀಯತೆಯ ದೃಷ್ಟಿಯಿಂದ ಈ ಮಹಾದಾನದಲ್ಲಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜೈ ಶ್ರೀರಾಮ್ ಚಾರಿಟೇಬಲ್ ಎಜುಕೇಶನ್ ಸೊಸೈಟಿಯ ಅಧ್ಯಕ್ಷ ಚಂದ್ರಶೇಖರ್ ಕಾರ್ಯದರ್ಶಿ ಪ್ರಭು ಆಲೂರೆ, ಖಜಾಂಚಿ ಪ್ರಭಾಕರ್ ಜಾಟ್ಲಾ, ಬಾಬುರಾವ್ ಸಂಗೋಳಗಿ, ಪರಮೇಶ್ವರ್ ಪಟ್ನೆ, ವಿಶ್ವನಾಥ್ ಬಿರಾದರ್ ನವೀನ್ ಯಾದವ್, ರಾಜ ಲಾಖೆ, ಅಲೋಕ್ ಸುಲ್ತಾನಪುರೆ ಹಾಗೂ ಪ್ರಮೋದ್ ಶೃಂಗಾರೆ ಸೇರಿದಂತೆ ಸೊಸೈಟಿಯ ಸದಸ್ಯರು ಉಪಸ್ಥಿತರಿದ್ದು, ಶಿಬಿರದ ಯಶಸ್ಸಿ ಗೆ ಸಹಕರಿಸಿದರು.

15 ಟಿಎಂಸಿ ನೀರಿಗಾಗಿ ಪ್ರತಿಭಟನೆ; ಕೆರೆ ಮತ್ತು ಕಾಲುವೆಗಳಿಗೆ ನೀರು ಹರಿಸಲು ಆಗ್ರಹಿಸಿ ರೈತರ ಪಾದಯಾತ್ರೆ

ಅಫಜಲಪುರ

ಐದು ದಶಕಗಳು ಕಳೆದರೂ ಇಲ್ಲಿವರೆಗೂ ನಮ್ಮ ಹಕ್ಕಿನ ನೀರು ಪಡೆಯಲು ನಮಗೆಲ್ಲರಿಗೂ ಸಾಧ್ಯವಾಗಿಲ್ಲ. ಇನ್ನಾದರೂ ನಾವೆಲ್ಲರೂ ಒಂದಾಗಿ ನಮ್ಮ ಹಕ್ಕಿನ ನೀರು ಪಡೆಯಲು ಒಂದಾಗಿ ಹೋರಾಟ ಮಾಡಬೇಕಿದೆ. ಈಗ ರೈತ ಮುಖಂಡರು ಹಮ್ಮಿಕೊಂಡಿರುವ ಪಾದಯಾತ್ರೆಗೆ ಹಳ್ಳಿಹಳ್ಳಿಯಿಂದ ರೈತರು ಆಗಮಿಸಿ ಬೆಂಬಲಿಸಿದಾಗ ಮಾತ್ರ ಯಶಸ್ವಿಯಾಗಲು ಸಾಧ್ಯವಾಗುತ್ತದೆ ಎಂದು ಡಾ.ಚನ್ನಮಲ್ಲ ಶಿವಯೋಗಿ ಶಿವಾಚಾರ್ಯರು ಹೇಳಿದರು.



ತಾಲೂಕಿನ ಅಳ್ಳಗಿ(ಬಿ) ಗ್ರಾಮದಲ್ಲಿ ಅಫಜಲಪುರ ತಾಲೂಕು ಶಾಶ್ವತ ನೀರಾವರಿ ಹೋರಾಟ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ರೈತರು ಒಗ್ಗಟ್ಟಾಗಿ ನೀರಿಗಾಗಿ ಹೋರಾಟ ಮಾಡಬೇಕು. ರೈತರು ಹೋರಾಟ ಮಾಡಿದರೆ ಮಾತ್ರ ಸರಕಾರಗಳು ಸ್ಪಂದಿಸಿ, ರೈತರ ಬೇಡಿಕೆಗಳನ್ನು ಪೂರೈಸುವ ಕಾಲಘಟ್ಟದಲ್ಲಿ ನಾವಿದ್ದೇವೆ. ಹೀಗಾಗಿ ಹೋರಾಟ ಅನಿವಾರ್ಯವಾಗಿದೆ. ಈ ಪಾದಯಾತ್ರೆಗೆ ನಮ್ಮ ಸಂಪೂರ್ಣ ಬೆಂಬಲ ಇರುತ್ತದೆ ಎಂದರು.

ಶಾಂತಲಿಂಗೇಶ್ವರ ಶಿವಾಚಾರ್ಯರು ಮಾತನಾಡಿ, ಅನ್ನದಾತ ಉಳಿದರೆ ಜಗತ್ತು ಉಳಿಯುತ್ತದೆ. ಶ್ರೀಮಂತನ ಬಳಿ ಎಷ್ಟೇ ಕೋಟಿ ಹಣ, ಚಿನ್ನ, ಬೆಳ್ಳಿ ಇದ್ದರೂ ಕೂಡ ಕೊನೆಗೆ ರೈತ ಬೆಳೆದ ಅನ್ನವನ್ನೇ ತಿನ್ನಬೇಕು. ಹೀಗಾಗಿ ರೈತರಿಗೆ ಬೆಂಬಲಿಸುವ ಕೆಲಸ ಎಲ್ಲರಿಂದಲೂ ಪಕ್ಷಾತೀತವಾಗಿ, ಜಾತ್ಯತೀತವಾಗಿ ನಡೆಯಬೇಕಿದೆ. ಭೀಮಾ ನದಿ ನೀರಿಗಾಗಿ ಹಲವು ವರ್ಷಗಳಿಂದ ಹೋರಾಟಗಳು ನಡೆಯುತ್ತಿದ್ದರೂ ಯಾವುದೇ ಪ್ರಯೋಜನವಾಗಿಲ್ಲ, ಪಾದಯಾತ್ರೆ ಹಮ್ಮಿಕೊಂಡಿರುವುದರಿಂದ ಈಗಲಾದರೂ ಸರಕಾರಗಳು ಸ್ಪಂದಿಸಿ ನಮ್ಮ ಬೇಡಿಕೆಗಳು ಪೂರೈಸಬೇಕು ಎಂದರು. ಕಾವೇರಿ ನದಿಯಂತೆ ನಮ್ಮ ಭಾಗದ ಜೀವನದಿ ಭೀಮಾನದಿಗೆ ಸರಕಾರಗಳು ಮುತುವರ್ಜಿ ವಹಿಸ ಬೇಕು. ಈ ಭಾಗದ ರೈತರು, ಹೋರಾಟಗಾರರು ಭೀಮಾನದಿ ಉಳಿವಿಗಾಗಿ ನಿರಂತರವಾಗಿ ಹೋರಾಟ ಮಾಡುತ್ತಾ ಬರುತ್ತಿದ್ದಾರೆ. ಈಗಲಾದರೂ ಸ್ಪಂದಿಸಿ ನಮ್ಮ ರೈತರಿಗೆ ನ್ಯಾಯ ಒದಗಿಸಿ ನಮ್ಮ ಜೀವನದಿಗೆ ಜೀವ ತುಂಬಿಸುವ ಕೆಲಸ ಆಗಬೇಕು.

ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರು ಅಫಜಲಪುರ.

ಈ ಸಂದರ್ಭದಲ್ಲಿ ಅಭಿನವ ಪುಂಡಲಿಂಗ ಮಹಾರಾಜರು, ಕೈಲಾಸಲಿಂಗ ಶಿವಾಚಾರ್ಯರು, ಅಭಿನವ ಗುರು ಬಸವ ಶಿವಾಚಾರ್ಯರು, ಮುಖಂಡರಾದ ಶಂಕರ ವ್ಯಾಕೇರಿ, ರಝಾಕ್ ಪಟೇಲ್, ರಮೇಶ ಪಾಟೀಲ್, ಚಂದ್ರಶೇಖರ ಕರಜಗಿ, ಚಿದಾನಂದ ಹಿರೇಮಠ, ಶಾಂತು ಅಂಜುಟಗಿ, ದೇವಣ್ಣ ಕಿರಸಾವಳಗಿ, ಮುರುಘೇಂದ್ರ ಮಸಳಿ, ಗುರು ಚಾಂದಕವಟೆ, ನಾಗರಾಜ ಬುಜರಿ, ನೂರ ಅಹ್ಮದ್ ಬಾಗವಾನ, ಸಿದ್ದು ಮಗಿ, ಮಲ್ಲಿಕಾರ್ಜುನ ನಿಂಗದಳ್ಳಿ, ಬಸಣ್ಣ ಗುಣಾರಿ, ಶಿವಪುತ್ರಪ್ಪ ಸಂಗೋಳಗಿ, ಅಪ್ಪಾಶ ಕಣ್ಣಿ, ಪ್ರಭಾವತಿ ಮೇತ್ರೆ, ಅಬ್ಬಾಸಲಿ ನದಾಫ್, ಹಣಮಂತ ಸೂರಗೊಂಡ, ಮಹಾಂತು ಬಿರಾದಾರ, ಪುಂಡಲಿಕ್ ಬಿರಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಕಹಿ ನುಂಗುತ್ತಿರುವ ಕೃಷಿಕರು, ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿರುವ ದುಷ್ಟರು

ರೈತರು ಆಕ್ರೋಶಗೊಳ್ಳಲು, ಬೀದಿಗೆ ಇಳಿದು ಪ್ರತಿಭಟಿಸಲು ಕಬ್ಬಿಗೆ ಕನಿಷ್ಠ ಬೆಂಬಲ ಬೆಲೆ ನಿಗದಿಯೊಂದೇ ಕಾರಣವಲ್ಲ. ಬರ, ಬೆಳೆ ನಾಶ, ಬೆಲೆ ಏರಿಕೆ, ಸಾಲ, ವಲಸೆ, ಉದ್ಯೋಗ ಸಿಗದಿರುವುದು ಎಲ್ಲವೂ ತಳಕು ಹಾಕಿಕೊಂಡಿದೆ. ಇವುಗಳಿಗೆ ಪರಿಹಾರ ಸೂಚಿಸಿ ಜನರು ನೆಮ್ಮದಿಯಾಗಿ ಬದುಕುವ ವಾತಾವರಣ ನಿರ್ಮಿಸಬೇಕಾದ ಸರ್ಕಾರಗಳು, ಸಬೂಬುಗಳ ಮೊರೆ ಹೋಗಿವೆ. ಕಾಲಹರಣಕ್ಕೆ ಜೋತುಬಿದ್ದಿವೆ. ದೂರುವ ತಂತ್ರಕ್ಕೆ ತಲೆಬಾಗಿ ತಲೆ ತಪ್ಪಿಸಿಕೊಳ್ಳುತ್ತಿವೆ.

ಪ್ರತಿ ಟನ್ ಕಬ್ಬಿಗೆ ಕನಿಷ್ಠ 5,500 ಬೆಂಬಲ ಬೆಲೆ ನಿಗದಿ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಿತ್ತೂರು ಕರ್ನಾಟಕದ ಆರು ಜಿಲ್ಲೆಯ ರೈತರು ಬೇಸಾಯ ಬಿಟ್ಟು ಬೀದಿಗೆ ಇಳಿದಿದ್ದಾರೆ. ರಸ್ತೆ, ರೈಲು ತಡೆದು ಪ್ರತಿಭಟಿಸುತ್ತಿದ್ದಾರೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿಯವರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಷ್ಟೇ ಅಲ್ಲ, ಬೇಡಿಕೆ ಈಡೇರುವವರೆಗೆ ಇಲ್ಲಿಂದ ಕದಲುವುದಿಲ್ಲ ಎಂಬ ಎಚ್ಚರಿಕೆಯನ್ನು ಕೇಂದ್ರ-ರಾಜ್ಯ ಸರ್ಕಾರಗಳಿಗೆ ರವಾನಿಸಿದ್ದಾರೆ.

ರೈತರು ಆಕ್ರೋಶಗೊಳ್ಳಲು, ಬೀದಿಗೆ ಇಳಿದು ಪ್ರತಿಭಟಿಸಲು ಕಬ್ಬಿಗೆ ಕನಿಷ್ಠ ಬೆಂಬಲ ಬೆಲೆ ನಿಗದಿಯೊಂದೇ ಕಾರಣವಲ್ಲ. ಬರ, ಬೆಳೆ ನಾಶ, ಬೆಲೆ ಏರಿಕೆ, ಸಾಲ, ವಲಸೆ, ಉದ್ಯೋಗ ಸಿಗದಿರುವುದು ಎಲ್ಲವೂ ತಳಕು ಹಾಕಿಕೊಂಡಿದೆ. ಇವುಗಳಿಗೆ ಪರಿಹಾರ ಸೂಚಿಸಿ ಜನರು ನೆಮ್ಮದಿಯಾಗಿ ಬದುಕುವ ವಾತಾವರಣ ನಿರ್ಮಿಸಬೇಕಾದ ಸರ್ಕಾರಗಳು, ಸಬೂಬುಗಳ ಮೊರೆ ಹೋಗಿವೆ. ಕಾಲಹರಣಕ್ಕೆ ಜೋತುಬಿದ್ದಿವೆ. ದೂರುವ ತಂತ್ರಕ್ಕೆ ತಲೆಬಾಗಿ ತಲೆ ತಪ್ಪಿಸಿಕೊಳ್ಳುತ್ತಿವೆ.

ಆ ತಪ್ಪಿಸಿಕೊಳ್ಳುವ ತಂತ್ರದ ಭಾಗವಾಗಿಯೇ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವರಾದ ಪ್ರಲ್ಹಾದ್ ಜೋಶಿಯವರು, ಸದ್ಯದಲ್ಲಿಯೇ ರೈತ ಪ್ರತಿನಿಧಿಗಳನ್ನು ದೆಹಲಿ ಕರೆಸಿಕೊಳ್ಳಲಾಗುವುದು ಎಂದು ಎದೆಯುಬ್ಬಿಸಿ ಹೇಳಿದರು. ಅದು ಕೇಂದ್ರ ಸರ್ಕಾರದ ಸ್ಪಂದನೆ, ರೈತ ಕಾಳಜಿಯಂತೆ ಕಂಡು, ಕೃಷಿಕರ ಕಷ್ಟ ಪರಿಹಾರವಾಗುವುದರಲ್ಲಿ ಅನುಮಾನವಿಲ್ಲ ಎಂಬ ಆಶಯ ಎಲ್ಲರದಾಗಿತ್ತು.

ಸಚಿವರು ಹೇಳಿದಂತೆ ಮಹಾರಾಷ್ಟ್ರ ಮತ್ತು ಕರ್ನಾಟಕದ 54 ಮಂದಿ ರೈತ ಪ್ರತಿನಿಧಿಗಳು ದೆಹಲಿಗೆ ಹೋಗಿದ್ದೂ ಆಯಿತು. ಅ. 12ರಂದು ಕೃಷಿ ಮತ್ತು ಆಹಾರ ಸಚಿವ ನೇತೃತ್ವದಲ್ಲಿ ಮೂರು ಗಂಟೆಯ ಸಭೆಯೂ ಜರುಗಿತು. ಆದರೆ ಆ ಸಭೆಯ ಫಲಿತಾಂಶ- ಸರ್ಕಾರ ಒಂದು ತಿಂಗಳು ಸಮಯ ಕೇಳಿತ್ತು. ಬೆಲೆ ಹೆಚ್ಚಳದ ನಿರ್ಧಾರ ಹೊರಬರದೆ, ತಿಂಗಳ ಸಮಯ ಕೇಳಿದ್ದು ರೈತರ ಅಸಮಾಧಾನಕ್ಕೆ ಕಾರಣವಾಯಿತು. ಸಮಸ್ಯೆ ಬಗೆಹರಿಸುವುದಾಗಿ ಹೇಳಿ ದೆಹಲಿಗೆ ಕರೆಸಿಕೊಂಡ ಪ್ರಲ್ಹಾದ್ ಜೋಶಿ ರೈತರನ್ನು ಅವಮಾನಿಸಿದ್ದಾರೆ ಎಂದು ಆಕ್ರೋಶಗೊಂಡ ರೈತರು, ಬೀದಿಗಿಳಿಯುವ ನಿರ್ಧಾರ ಕೈಗೊಂಡರು.

ಅ. 13ರಿಂದ ಉತ್ತರ ಕರ್ನಾಟಕ ಭಾಗದ ರೈತರು ಬೀದಿಗಿಳಿಯುತ್ತಿದ್ದಂತೆ ಎಚ್ಚೆತ್ತ ಕೇಂದ್ರ ಸರ್ಕಾರ, ಅಕ್ಟೋಬರ್ 14ರಂದು, ಕರ್ನಾಟಕ ಮತ್ತು ಮಹಾರಾಷ್ಟ್ರದ ಕಬ್ಬು ಬೆಳೆಗಾರರ ಬೇಡಿಕೆಗಳ ಕುರಿತು ಉನ್ನತ ಮಟ್ಟದ ಸಮಿತಿ- ಕೇಂದ್ರ ಮತ್ತು ರಾಜ್ಯಗಳ ಪ್ರತಿನಿಧಿಗಳು, ರೈತ ಸಂಘಟನೆಗಳು, ಸಕ್ಕರೆ ಕಾರ್ಖಾನೆಗಳು ಹಾಗೂ ತಜ್ಞರನ್ನು ಒಳಗೊಂಡ ಉನ್ನತ ಮಟ್ಟದ ಜಂಟಿ ಸಮಿತಿ ರಚಿಸುವುದಾಗಿ ಘೋಷಿಸಿದೆ.

ಉನ್ನತ ಮಟ್ಟದ ಜಂಟಿ ಸಮಿತಿ ರಚನೆ ಘೋಷಣೆ ಬೆಲೆ ಹೆಚ್ಚಳಕ್ಕೆ ಪರಿಹಾರವಲ್ಲ. ಕೃಷಿಕರ ಕಷ್ಟಗಳು ನೀಗುವುದಿಲ್ಲ. ಅದಕ್ಕಿಂತ ಹೆಚ್ಚಾಗಿ ಸಮಿತಿಯು ಯಾವಾಗ ವರದಿ ನೀಡುತ್ತದೆ, ಅದರ ಶಿಫಾರಸುಗಳನ್ನು ಸರ್ಕಾರ ಯಾವಾಗ ಒಪ್ಪಿಕೊಳ್ಳುತ್ತದೆ ಮತ್ತು ರೈತರಿಗೆ ಯಾವಾಗ ಹೆಚ್ಚುವರಿ ಹಣ ಸಿಗುತ್ತದೆ ಎಂಬುದು ಯಾರಿಗೂ ಗೊತ್ತಿಲ್ಲ.

ಸರ್ಕಾರಗಳು ಕಾಲಕಾಲಕ್ಕೆ ರೈತರ ಆಕ್ರೋಶವನ್ನು ತಣ್ಣಗಾಗಿಸಲು ಸಮಿತಿ ರಚನೆಯಂತಹ ವಂಚನೆಯ ಮಾರ್ಗಗಳನ್ನು ಅಸ್ತ್ರಗಳನ್ನಾಗಿಸಿಕೊಳ್ಳುವುದು, ಅವುಗಳ ಮರೆಯಲ್ಲಿ ಮತ್ತಷ್ಟು ದಿನದೂಡುವುದು ನಡೆದೇ ಇದೆ. ಇಂತಹ ಮೋಸದಾಟಗಳಿಗೆ ರೈತರು ಬಲಿಯಾಗುತ್ತ ಬಂದಿರುವುದೂ ಇದೆ.

ಇಷ್ಟಾದರೂ ಕರ್ನಾಟಕದ ಕೃಷಿಕರು ಇವತ್ತಿಗೂ ಕಬ್ಬು ಬೆಳೆಯನ್ನು ನೆಚ್ಚಿಕೊಂಡಿದ್ದಾರೆ. ಪ್ರಮುಖ ವಾಣಿಜ್ಯ ಬೆಳೆ ಎಂದೇ ಭ್ರಮಿಸಿದ್ದಾರೆ. ಅದರಲ್ಲೂ ಉತ್ತರ ಕರ್ನಾಟಕದ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಬಳ್ಳಾರಿ ಮತ್ತು ಕಲಬುರಗಿ ಹಾಗೂ ದಕ್ಷಿಣ ಕರ್ನಾಟಕದ ಮಂಡ್ಯ ಭಾಗದ ರೈತರು, ಸುಮಾರು 5.40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬನ್ನು ಬೆಳೆಯುತ್ತಿದ್ದಾರೆ. ಕಬ್ಬಿನ ಉತ್ಪಾದನೆ 202324ರಲ್ಲಿ 4.181 ಕೋಟಿ ಟನ್ ಇದ್ದದ್ದು, 202425ರಲ್ಲಿ 4.806 ಕೋಟಿ ಟನ್‌ಗೆ ಏರಿದೆ. ಕಬ್ಬಿನ ಉತ್ಪಾದನೆಗೆ ತಕ್ಕಂತೆ, 89 ಸಕ್ಕರೆ ಕಾರ್ಖಾನೆಗಳು ತಲೆ ಎತ್ತಿವೆ. ಅವುಗಳಿಂದ ವಾರ್ಷಿಕ 4.806 ಕೋಟಿ ಟನ್ ಸಕ್ಕರೆ ಉತ್ಪಾದಿಸಲಾಗುತ್ತದೆ. ಆ ಮೂಲಕ ಗ್ರಾಮೀಣ ಉದ್ಯೋಗ, ದೇಶದ ಆರ್ಥಿಕತೆ ವೃದ್ಧಿಸಿದೆ.

ಕಬ್ಬಿನಿಂದ ದೇಶದ ಆರ್ಥಿಕತೆ ಬಲಗೊಳ್ಳುತ್ತಿದ್ದರೂ ಕಬ್ಬು ಬೆಳೆಯುವ ರೈತರ ಸ್ಥಿತಿ ಮಾತ್ರ ಶೋಚನೀಯವಾಗಿದೆ. ಗದ್ದೆ ಹದಮಾಡುವುದು, ಕಬ್ಬಿನ ನಾಟಿ, ಕೂಲಿ, ಗೊಬ್ಬರ, ಔಷಧಿ, ನೀರು, ಸಾಗಣೆ ಮತ್ತು ಸಾಲದ ಬಡ್ಡಿ ಎಲ್ಲ ಸೇರಿ ರೈತರ ಶ್ರಮಕ್ಕೆ ಬೆಲೆಯೇ ಇಲ್ಲವಾಗಿದೆ. ಟನ್ ಕಬ್ಬಿಗೆ ಈಗ ಸಿಗುತ್ತಿರುವ ರೂ. 3,300 ಯಾವುದಕ್ಕೂ ಸಾಲದಾಗಿದೆ. ಇದರ ಜೊತೆಗೆ, ಕಬ್ಬಿನ ಇಳುವರಿ ಇಳಿಕೆಯಾಗುವುದು ಹಾಗೂ ಸಕಾಲದಲ್ಲಿ ಕಾರ್ಖಾನೆಗಳಿಂದ ಹಣ ಪಾವತಿಯಾಗದಿರುವುದು, ರೈತರನ್ನು ಸಂಕಷ್ಟದ ಸುಳಿಗೆ ನೂಕುತ್ತಿವೆ.

ಆ ನಿಟ್ಟಿನಲ್ಲಿ ಪ್ರತಿ ಟನ್‌ಗೆ ಕನಿಷ್ಠ 5,500 ಬೆಲೆ ಸೇರಿದಂತೆ ಹೆಚ್ಚಿನ ದರಕ್ಕೆ ಬೇಡಿಕೆ ಇಟ್ಟು ಪ್ರತಿಭಟನೆಗಿಳಿದಿರುವ ರೈತರ ಬೇಡಿಕೆ ನ್ಯಾಯಯುತವೇ ಆಗಿದೆ. ಒಂದು ಟನ್ ಕಬ್ಬಿನಿಂದ ರೈತರಿಗೆ 3,300 ಸಿಕ್ಕರೆ, ಇದರ ನಾಲ್ಕು ಪಟ್ಟು ಲಾಭ ಕಾರ್ಖಾನೆ ಮಾಲೀಕರಿಗೆ ಸಿಗುತ್ತದೆ. ಈಗ ಕಾರ್ಖಾನೆಗಳಿಗೆ ಸಕ್ಕರೆಯಿಂದ ಬರುವ ಲಾಭವೇ ಅಧಿಕವಾಗಿದೆ. ಇದಲ್ಲದೆ ಮೊಲಾಸಿಸ್, ಎಥೆನಾಲ್ ಮತ್ತು ವಿದ್ಯುತ್ ಉತ್ಪಾದನೆಯಿಂದಲೂ ಮಾಲೀಕರಿಗೆ ಲಾಭವಿದೆ.

ಆದರೆ, ಕಬ್ಬು ಬೆಳೆಗಾರರಿಗೆ ಇವತ್ತಿನವರೆಗೂ ಕಾರ್ಖಾನೆ ಮಾಲೀಕರು ಕಬ್ಬಿನ ಇಳುವಳಿ, ಸಕ್ಕರೆ ಉತ್ಪಾದನೆಯ ಲೆಕ್ಕದಲ್ಲಷ್ಟೇ ಬೆಲೆ ನಿಗದಿಗೊಳಿಸುತ್ತಿದ್ದಾರೆಯೇ ಹೊರತು, ಎಥೆನಾಲ್, ಮೊಲಾಸಿಸ್ ಮತ್ತು ವಿದ್ಯುತ್ ಉತ್ಪಾದನೆಯ ಲೆಕ್ಕವನ್ನೂ ಕೊಡುತ್ತಿಲ್ಲ, ಅದರ ಲಾಭಾಂಶವನ್ನೂ ಹಂಚುತ್ತಿಲ್ಲ.

ಸಕ್ಕರೆ ಕಾರ್ಖಾನೆಗಳ ಅಧಿಕೃತ ಮಾಹಿತಿ ಪ್ರಕಾರವೇ, ಕಳೆದವರ್ಷ ಮೊಲಾಸಿಸ್ ಉತ್ಪಾದನೆಯೊಂದರಿಂದಲೇ 36 ಸಾವಿರ ಕೋಟಿ ವಹಿವಾಟು ಆಗಿದೆ. ಅದರಲ್ಲಿ ಸುಮಾರು 9 ಸಾವಿರ ಕೋಟಿ ಜಿಎಸ್‌ಟಿ ರೂಪದಲ್ಲಿ ಕೇಂದ್ರ ಸರ್ಕಾರಕ್ಕೆ ಹೋಗಿದೆ. ರಾಜ್ಯ ಸರ್ಕಾರವೂ ಅಲ್ಪಸ್ವಲ್ಪ ಪಡೆದಿದೆ. ಜೊತೆಗೆ ಲಾಭ ಪಡೆದ ಸಕ್ಕರೆ ಕಾರ್ಖಾನೆ ಮಾಲೀಕರು ಬಹುಪಾಲು ರಾಜಕಾರಣಿಗಳೇ ಆಗಿದ್ದಾರೆ. ಬಿಜೆಪಿಯ ಮುರುಗೇಶ್ ನಿರಾಣಿ ಒಡೆತನದಲ್ಲಿ 18, ಕಾಂಗ್ರೆಸ್ಸಿ ನ ಸಚಿವ ಸತೀಶ್ ಜಾರಕಿಹೊಳಿ ಮಾಲೀಕತ್ವದಲ್ಲಿ 8, ಶಾಮನೂರು ಶಿವಶಂಕರಪ್ಪನವರ 3, ಲಕ್ಷ್ಮೀ ಹೆಬ್ಬಾಳ್ಕರ್ ಅವರ 2, ಪ್ರಭಾಕರ ಕೋರೆಯವರ 2, ಲಕ್ಷ್ಮಣ ಸವದಿಯವರ 2 ಹೀಗೆ ಎಲ್ಲ ಪಕ್ಷದವರೂ ಇದ್ದಾರೆ. ಎಲ್ಲರೂ ಒಂದಾಗಿದ್ದಾರೆ.

ಕಬ್ಬು ಬೆಳೆಗಾರರಿಂದ ಆಯ್ಕೆಯಾಗುವ ಈ ರಾಜಕೀಯ ನಾಯಕರು ಶಾಸಕರಾಗಿ, ಸಂಸದರಾಗಿ, ಸಚಿವರಾಗಿ ಅಧಿಕಾರದ ಸ್ಥಾನವನ್ನು ಅಲಂಕರಿಸಿದ ಮೇಲೆ ರೈತರನ್ನು ಮರೆಯುತ್ತಾರೆ. ಕೃಷಿಕರ ಕೂಗು ಜೋರಾದಾಗ, ಕಾನೂನು-ಕಾಯ್ದೆಗಳ ಸಬೂಬು ಹೇಳುತ್ತಾರೆ. ಅಸಲಿಗೆ ಕಬ್ಬಿನ ಕನಿಷ್ಠ ನ್ಯಾಯಸಮ್ಮತ ಬೆಲೆ() ನಿಗದಿಪಡಿಸುವ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಹಾಗೆಯೇ ಎಷ್ಟು ಬೆಲೆ ಸಿಗಬೇಕು() ಎಂಬುದರಲ್ಲಿ ರಾಜ್ಯ ಸರ್ಕಾರ ಮತ್ತು ಸಕ್ಕರೆ ಕಾರ್ಖಾನೆಗಳ ಪಾತ್ರವೂ ಇದೆ.

ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗದ () ಶಿಫಾರಸುಗಳು ಹಾಗೂ ರಾಜ್ಯಗಳ ಸಮಾಲೋಚನೆಯ ಆಧಾರದಲ್ಲಿ ಕೇಂದ್ರ ಸರ್ಕಾರ ನಿಗದಿಪಡಿಸುತ್ತದೆ. ಈ ದರಕ್ಕಿಂತ ಕಡಿಮೆ ಬೆಲೆ ನೀಡಿ ಸಕ್ಕರೆ ಕಾರ್ಖಾನೆಗಳು ಕಬ್ಬು ಖರೀದಿಸುವಂತಿಲ್ಲ. ಆದರೆ ಕೇಂದ್ರ, ರಾಜ್ಯ ಮತ್ತು ಕಾರ್ಖಾನೆ ಮಾಲೀಕರು ಒಮ್ಮತಕ್ಕೆ ಬರುತ್ತಿಲ್ಲ. ಕಬ್ಬು ಬೆಳೆಗಾರರಿಗೆ ನ್ಯಾಮಸಮ್ಮತ ಬೆಲೆ ಸಿಗುತ್ತಿಲ್ಲ. ಇದು ಕಬ್ಬು ಬೆಳೆಗಾರರ ಸಮಸ್ಯೆ ಮಾತ್ರವಲ್ಲ, ಅಧಿಕಾರಸ್ಥರು ಮತ್ತು ಕಾರ್ಖಾನೆ ಮಾಲೀಕರೆಂಬ ದುಷ್ಟರ ವಿರುದ್ಧ ಕೃಷಿಕರು ಒಂದಾಗದೆ ನ್ಯಾಯ ಸಿಗುವುದಿಲ್ಲ.

ಗಗನಕ್ಕೇರಿದ ಅಕ್ಕಿ ಬೆಲೆ: ತತ್ತರಿಸಿದ ಬಡ, ಮಧ್ಯಮ ವರ್ಗದ ಬದುಕು!

ರಾಜ್ಯಾದ್ಯಂತ ತೀವ್ರ ಮಳೆ ಕೊರತೆ ಮತ್ತು ಬರಗಾಲದ ಕರಿಛಾಯೆ ಕೃಷಿ ಕ್ಷೇತ್ರವನ್ನು ತತ್ತರಿಸುವಂತೆ ಮಾಡಿದೆ. ಅನ್ನದಾತನ ಬದುಕನ್ನು ಸಂಕಷ್ಟಕ್ಕೆ ನೂಕಿದ್ದ ಈ ಬರಗಾಲದ ಬಿಸಿ ಇದೀಗ ನೇರವಾಗಿ ಜನಸಾಮಾನ್ಯರ ತಟ್ಟೆಗೆ ತಟ್ಟಿದ್ದು, ಅಕ್ಕಿಯ ಬೆಲೆ ಗಗನಕ್ಕೇರಿದೆ. ಮಾರುಕಟ್ಟೆಯಲ್ಲಿ ದಿನಸಿ ಅಂಗಡಿಗಳ ಮೆಟ್ಟಲು ಹತ್ತುವ ಗ್ರಾಹಕರು, ವ್ಯಾಪಾರಿಗಳು ಹೇಳುವ ದರ ಕೇಳಿ ಕಕ್ಕಾಬಿಕ್ಕಿಯಾಗಿದ್ದು, ಬಡ ಹಾಗೂ ಮಧ್ಯಮ ವರ್ಗದ ಜನರ ಬದುಕಿಗೆ ಗಂಭೀರ ಹೊರೆಯಾಗಿ ಪರಿಣಮಿಸಿದೆ.

ರಾಜ್ಯಾದ್ಯಂತ ತೀವ್ರ ಮಳೆ ಕೊರತೆ ಹಾಗೂ ಬರಗಾಲದ ಪರಿಣಾಮ ಕೃಷಿ ಕ್ಷೇತ್ರವನ್ನು ತತ್ತರಿಸುವಂತೆ ಮಾಡಿದೆ. ಈ ಬರಗಾಲದ ಬಿಸಿ ಅಕ್ಕಿ ಬೆಲೆಗೂ ತಾಕಿದ್ದು, ಗಗನಕ್ಕೇರಿದೆ. ಗ್ರಾಹಕರು ಅಂಗಡಿಗಳಿಗೆ ಹೋಗಿ ಕೇಳಿದರೆ, ವ್ಯಾಪಾರಿಗಳು ಹೇಳುವ ಬೆಲೆ ಕೇಳಿ ಕಕ್ಕಾಬಿಕ್ಕಿಯಾಗುವಂತಾಗಿದೆ. ಕೆ.ಜಿ ,ಅಕ್ಕಿ ದರಕ್ಕೆ 100ರೂ ದಾಟಿದೆ. 25ಕೆ.ಜಿ ಚೀಲಕ್ಕೆ 2000ರೂ ದಾಟಿದೆ. ಇದರಿಂದ ಜನಸಾಮಾನ್ಯರ ಬದುಕಿಗೆ ಗಂಭೀರ ಹೊರೆಯಾಗಿದೆ. ಮತ್ತೊಂದಡೆ ಹೋಟೆಲ್‌ಗಳ ಆಹಾರ ಪದಾರ್ಥಗಳ ಬೆಲೆಯೂ ಹೆಚ್ಚಾಗುವ ಆತಂಕ ಎದುರಾಗಿದೆ.

ಗದಗ ಜಿಲ್ಲೆಯ ಗಜೇಂದ್ರಗಡ ಸಗಟು ಮಾರುಕಟ್ಟೆಗೆ ಕೊಪ್ಪಳ, ಗಂಗಾವತಿ, ದಾವಣಗೆರೆ, ಕಾರಟಗಿ, ರಾಯಚೂರು, ಸಿಂಧನೂರು ಸೇರಿ ಇತರೆಡೆಯಿಂದ ಅಕ್ಕಿ ಪೂರೈಕೆಯಾಗುತ್ತದೆ. ಕಳೆದ ಕೆಲ ತಿಂಗಳಿಂದ ಸತತವಾಗಿ ಅಕ್ಕಿ ಬೆಲೆ ಏರಿಕೆಯಾಗುತ್ತಲೇ ಇದೆ. 25 ಕೆಜಿ ಚೀಲದ ಬೆಲೆ ಹಿಂದಿನ ತಿಂಗಳು 1,450 ರೂ. ಆಸು-ಪಾಸಿನಲ್ಲಿತ್ತು. ಆದರೆ ಈಗ 1,850 ರೂ. ದಿಂದ 2000ಗೆ ಹೆಚ್ಚಾಗಿದೆ.

ಚಿಲ್ಲರೆ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಅಕ್ಕಿ ಕೆಜಿಗೆ 100 ರೂ. ಗಡಿ ದಾಟಿದೆ. ಗಜೇಂದ್ರಗಡ ಮಾರುಕಟ್ಟೆಗೆ ಸೇರಿ ನಾನಾ ಕಡೆಗಳಿಂದ ನಿತ್ಯ ಸಹಸ್ರಾರು ಕ್ವಿಂಟಾಲ್ ಅಕ್ಕಿ ಮಾರುಕಟ್ಟೆಗೆ ಬರುತ್ತಿದೆ. ಜನಸಾಮಾನ್ಯರು ಅಕ್ಕಿ ಖರೀದಿ ಮಾಡಲು ಹೋಗಿ ಕೇಳಿದರೆ, ವ್ಯಾಪರಸ್ಥರು ಅಕ್ಕಿ ದರ ಹೇಳಿದ್ದು ಕೇಳಿ ಬಡ ಹಾಗೂ ಮದ್ಯಮ ವರ್ಗದ ಜನ ಹೌಹಾರಿದ್ದಾರೆ.

ಎಪಿಎಂಸಿ ಸಗಟು ಮಾರುಕಟ್ಟೆಯಲ್ಲಿ ಹಳೆಯ ಸೋನಾ ಮಸೂರಿ ಹಸಿ ಅಕ್ಕಿಯ ಬೆಲೆ ಕೆ.ಜಿ.ಗೆ ₹70ರಿಂದ ₹82ಕ್ಕೆ ಏರಿಕೆಯಾಗಿದೆ. ಸೋನಾ ಮಸೂರಿ ಆವಿಯಲ್ಲಿ ಬೇಯಿಸಿದ ಅಕ್ಕಿಯ ಬೆಲೆ ₹65ರಿಂದ ₹75ಕ್ಕೆ ಹೆಚ್ಚಳವಾಗಿದೆ. ಇನ್ನು ಬಾಸ್ಮತಿ ಅಕ್ಕಿಯ ಬೆಲೆ ಕೆ.ಜಿ.ಗೆ ₹110ರಿಂದ ₹160ಕ್ಕೆ ಜಿಗಿದಿದ್ದರೆ, ಬುಲೆಟ್ ಅಕ್ಕಿಯ ಬೆಲೆ ₹80ರಿಂದ ₹100ಕ್ಕೆ ಏರಿಕೆಯಾಗಿದೆ. ಕೋಲಂ ಅಕ್ಕಿಯ ಬೆಲೆ ₹75ರಿಂದ ₹100ಕ್ಕೆ ತಲುಪಿದೆ. ರಾಜಮುಡಿ ಅಕ್ಕಿಯ ಬೆಲೆ ಕೂಡ ₹125ರಿಂದ ₹150ಕ್ಕೆ ಹೆಚ್ಚಳವಾಗಿದೆ.



ಅಕ್ಕಿಯ ತಳಿಗೆ ಅನುಗುಣವಾಗಿ ಕೆ.ಜಿ.ಗೆ ₹20ರಿಂದ ₹50ರವರೆಗೆ ಬೆಲೆ ಹೆಚ್ಚಳವಾಗಿರುವುದು ಗ್ರಾಹಕರಿಗೆ ದೊಡ್ಡ ಹೊಡೆತ ನೀಡಿದೆ. ಪ್ರತಿನಿತ್ಯ ಅಕ್ಕಿಯನ್ನೇ ಪ್ರಧಾನ ಆಹಾರವಾಗಿ ಅವಲಂಬಿಸಿದ ಬಡ ಹಾಗೂ ಮಧ್ಯಮ ಕುಟುಂಬಗಳು ಮಾಸಿಕ ಬಜೆಟ್ ನಲ್ಲಿ ಹೆಚ್ಚುವರಿ ಹಣ ವ್ಯಯಿಸಬೇಕಾದ ಅನಿವಾರ್ಯತೆಗೆ ಸಿಲುಕಿದ್ದು, ದಿನಸಿ ಪದಾರ್ಥಗಳ ಬೆಲೆ ನಿಯಂತ್ರಣಕ್ಕೆ ತರಲು ಸರಕಾರ ತುರ್ತು ಕ್ರಮ ಕೈಗೊಳ್ಳಬೇಕು'' ಎಂಂದು ಸಾರ್ವಜನಿಕರ ಒತ್ತಾಯಿಸುತ್ತಿದ್ದಾರೆ.

ಅಕ್ಕಿ ಬೆಲೆ ಏರಿಕೆಯಿಂದ ಹೋಟೆಲ್ ಗಳಿಗೂ ಹೊರೆ; ಮಾರುಕಟ್ಟೆಯಲ್ಲಿ ಅಕ್ಕಿ ಬೆಲೆ ಏರಿಕೆಯಿಂದ ಹೋಟೆಲುಗಳಿಗೂ ಹೊರೆಯಾಗುತ್ತಿದೆ. ಹೋಟೆಲಗಳಲ್ಲಿ ಹೆಚ್ಚು ಅಕ್ಕಿಯ ವಿವಿಧ ಆಹಾರ ಖ್ಯಾಧ್ಯಗಳನ್ನು ತಯಾರಿಸಲಾಗುತ್ತಿದ್ದು, ಹೆಚ್ಚು ಅಕ್ಕಿಯನ್ನು ಖರೀದಿ ಮಾಡುತ್ತಿದ್ದರು. ಅಕ್ಕಿ ಬೆಲೆ ಏರಿಕೆಯಿಂದಾಗಿ ಜನಸಮಾನ್ಯರು ಅಷ್ಟೇ ಅಲ್ಲ ಹೊಟೇಲ್ ಮಾಲೀಕರಿಗೂ ಗಾಯದ ಮೇಲೆ ಬರೆ ಎಳದಂತಾಗಿದೆ. ಬೆಲೆ ಏರಿಕೆಯಿಂದ ಹೋಟೆಲ್ ಮಾಲೀಕರು ಆಹಾರ ಪಾದಾರ್ಥಗಳ ಬೆಲೆಯನ್ನು ಏರಿಕೆ ಮಾಡಲು ಚಿಂತಿಸುತ್ತಿದ್ದಾರೆ.

ಬೆಲೆ ಏರಿಕೆಗೆ ಕಾರಣ: ಅಕ್ಕಿ ದರ ಏರಿಕೆಗೆ ಅನೇಕ ಕಾರಗಳು ಇದ್ದು, ರಾಜ್ಯದಲ್ಲಿ ಭತ್ತ ಬೆಳೆಯುವ ಜಿಲ್ಲೆಗಳಾದ ರಾಯಚೂರು, ಸಿಂಧನೂರು, ಸಿರಗುಪ್ಪ, ಗಂಗಾವತಿ, ದಾವಣಗೆರೆ ಭದ್ರಾವತಿ ಭಾಗಗಳಲ್ಲಿ ಮಳೆ ಕೊರತೆಯಿಂದ ತೀವ್ರ ಬರಗಾಲ ಉಂಟಾಗಿದ್ದು ಭತ್ತದ ಇಳುವರಿಯಲ್ಲಿ ಗಣನೀಯವಾಗಿ ಕಡಿಮೆಯಾಗಿದೆ. ಕರ್ನಾಟಕಕ್ಕೆ ಹೆಚ್ಚಿನ ಪ್ರಮಾನದಲ್ಲಿ ಅಕ್ಕಿ ಪೂರೈಸುವ ಪಕ್ಕದ ರಾಜ್ಯಗಳಲ್ಲಿಯೂ ಒಣಹವೆ ಹಾಗೂ ಮಳೆ ಕೊರತೆಯಿಂದ ಭತ್ತದ ಇಳುವರಿ ಕಡಿಮೆ ಆಗಿದ್ದರಿಂದ ಉತ್ಪಾದನೆಯಲ್ಲಿ ಇಳಿಕೆಯಾಗಿದೆ. ಮಾರುಕಟ್ಟೆಯಲ್ಲಿ ಬೇಡಿಕೆಗೆ ತಕ್ಕಷ್ಟು ಸರಬರಾಜು ಇಲ್ಲದಿರುವುದು ಮತ್ತು ಮಧ್ಯವರ್ತಿಗಳ ಹಿಡಿತದಿಂದಾಗಿ ಕೃತಕ ಅಭಾವ ಸೃಷ್ಟಿಯಾಗಿರುವುದು ಕೂಡ ಬೆಲೆ ಹೆಚ್ಚಳಕ್ಕೆ ಕಾರಣ ಎನ್ನಲಾಗುತ್ತಿದೆ'' ಎಂದು ವ್ಯಾಪಾರಸ್ಥರು ಹೇಳುವರು.

ಜೊತೆಗೆ ಮಧ್ಯಮ ಕುಟುಂಬದ ಮಹಿಳೆ ಕೆಂಚವ್ವ ಮಾತನಾಡಿ, ''ಅಂಗಡಿಗಳಿಗೆ ಅಕ್ಕಿ ಬೆಲೆ ಕೇಳಿದರೂ ಕೆ.ಜಿ. 80-100ರೂ ಹೇಳ್ತಿದ್ದಾರೆ. ಇಷ್ಟು ರೊಕ್ಕ ಕೊಟ್ಟು ಅಕ್ಕಿ ಕೊಳ್ಳಾಕ ಆಗಲ್ಲರಿ. ಬಡವರು, ಮಧ್ಯಮ ವರ್ಗದ ಜನರು ಬೆಲೆ ಇಷ್ಟ್ ಇದ್ರ ಅನ್ನನ ತಿನ್ನಾಕ ಎಲ್ಲಿ ಆಗ್ತೈತರಿ.

ಜೊತೆಗೆ ಬಾಲು ರಾಠೋಡ್ ಮಾತನಾಡಿ, ''ಈ ಮೊದಲೇ ಸ್ಟಾಕ್ ಮಾಡಿಕೊಂಡ ಅಕ್ಕಿಯನ್ನು ಬಂಡವಾಳ ಶಾಹಿಗಳು ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿದ್ದಾರೆ. ಕೂಡಲೇ ರಾಜ್ಯ ಹಾಗೂ ಕೇಂದ್ರ ಸರ್ಕಾರ ಅಕ್ಕಿ ದರವನ್ನು ಕಡಿಮೆ ಮಾಡಿ, ಜನ ಸಾಮಾನ್ಯರಿಗೆ ಅನುಕೂಲ ಮಾಡಿಕೊಡಬೇಕು'' ಎಂದು ಹೇಳಿದರು.

ಕೃತಕ ಅಭಾವ ಸೃಷ್ಟಿಸುವ ಮಧ್ಯವರ್ತಿಗಳ ಹಾಗೂ ಬಂಡವಾಳಶಾಹಿಗಳ ಹಿತಾಸಕ್ತಿಗೆ ಕಡಿವಾಣ ಹಾಕಿ, ಮಾರುಕಟ್ಟೆಯಲ್ಲಿ ಅಗತ್ಯ ವಸ್ತುಗಳ ಬೆಲೆಯನ್ನು ನಿಯಂತ್ರಣಕ್ಕೆ ತರಲು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ತುರ್ತಾಗಿ ಸೂಕ್ತ ಕ್ರಮ ಕೈಗೊಳ್ಳಬೇಕಿದೆ. ಇಲ್ಲದಿದ್ದರೆ ಜನಸಾಮನ್ಯರ ಆಕ್ರೋಶ ಮತ್ತಷ್ಟು ಹೆಚ್ಚಾಗುವುದರಲ್ಲಿ ಸಂಶಯವಿಲ್ಲ.

ಬೆಳಗಾವಿ ಬಿಸಿಲಿಗೂ ಕುಗ್ಗದೆ ಕಬ್ಬಿಗೆ ₹5500 ಬೆಲೆಗಾಗಿ ಮುಂದುವರೆದ ಹೋರಾಟ: ರಾಜ್ಯದಲ್ಲಿ ರೈತಶಕ್ತಿಯ ಅನಾವರಣ

ಕಬ್ಬಿಗೆ ಪ್ರತಿ ಟನ್‌ಗೆ ₹5,500 ಬೆಲೆ ನೀಡಬೇಕು, ಸಕ್ಕರೆಗೆ ಪ್ರತಿ ಕೆ.ಜಿ.ಗೆ ₹60 ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನಿಗದಿಪಡಿಸಬೇಕು ಹಾಗೂ ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹತ್ತರಗಿ ಟೋಲ್ ನಾಕಾ ಸೇರಿದಂತೆ ರಾಜ್ಯದ ಅನೇಕ ಕಡೆಗಳಲ್ಲಿ ನಡೆಯುತ್ತಿರುವ ರೈತರ ಹೋರಾಟ ಗಮನ ಸೆಳೆದಿದೆ. ರೈತ ಮುಖಂಡರಾದ ಶಶಿಕಾಂತ ಗುರೂಜಿ ಹಾಗೂ ಚೂನಪ್ಪ ಪೂಜೇರಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಲಕ್ಷಾಂತರ ರೈತರು ಪಾಲ್ಗೊಂಡಿದ್ದರು ಎಂಬುದು ಹೋರಾಟಗಾರರ ಅಂದಾಜು. ಬಿಸಿಲಿನ ತಾಪವನ್ನೂ ಲೆಕ್ಕಿಸದೆ ರಸ್ತೆಯ ಮೇಲೆ ಕುಳಿತು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದ ರೈತರು, ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒಕ್ಕೊರಲಿನಿಂದ ಆಗ್ರಹಿಸಿದರು.

ಸೆಪ್ಟೆಂಬರ್ 29 ರಂದು ಹುಬ್ಬಳ್ಳಿಯಲ್ಲಿ ಲಕ್ಷಾಂತರ ರೈತರು ಪ್ರತಿಭಟನೆ ನಡೆಸಿದ್ದರು. ನಂತರ ಬಿಜೆಪಿ ಪಕ್ಷದ ಶಾಸಕರು ಮನವೊಲಿಸಿ ದೆಹಲಿಯಲ್ಲಿ ಸಭೆ ಮಾಡುವುದಾಗಿ ತಿಳಿಸಿದ್ದರು. ಆದರೆ ದೆಹಲಿಯಲ್ಲಿ ರೈತ ಮುಖಂಡರು ಹಾಗೂ ಕೇಂದ್ರ ಸಚಿವರ ನಡುವೆ ನಡೆದ ಅಕ್ಟೋಬರ 12ರ ಸಭೆಯ ಮಾತುಕತೆಯಿಂದ ನಿರೀಕ್ಷಿತ ಫಲಿತಾಂಶ ಸಿಗಲಿಲ್ಲ ಎಂಬ ಅಸಮಾಧಾನವೇ ಮತ್ತೊಂದು ಹೋರಾಟಕ್ಕೆ ಕಾರಣವಾಗಿದೆ.

ಹತ್ತರಗಿ ಟೋಲ್ ನಾಕಾದಲ್ಲಿ ನಡೆದ ಪ್ರತಿಭಟನೆಯಿಂದ ಪುಣೆ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರಕ್ಕೂ ಅಡಚಣೆಯಾಗಿತ್ತು. ಬಳಿಕ ಅಕ್ಟೋಬರ್ 15ರಂದು ಹೋರಾಟದ ಮೂರನೇ ದಿನ ರೈತರು ಹೆದ್ದಾರಿ ತಡೆಯನ್ನು ತೆರವುಗೊಳಿಸಿ, ಹತ್ತರಗಿಯಿಂದ ಹುಬ್ಬಳ್ಳಿಯಲ್ಲಿರುವ ಕೇಂದ್ರ ಸಚಿವ ಪ್ರಲಾದ ಜೋಶಿ ಅವರ ನಿವಾಸದತ್ತ ಪಾದಯಾತ್ರೆ ಆರಂಭಿಸಿದರು.

ಹತ್ತರಗಿ ಟೋಲ್ ನಾಕಾದ ಪ್ರತಿಭಟನೆಯಲ್ಲಿ ರೈತರ ಒಗ್ಗಟ್ಟು ಎದ್ದು ಕಾಣುತ್ತಿತ್ತು. ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ರೈತರು ಬೆಳಗ್ಗೆಯಿಂದ ರಾತ್ರಿಯವರೆಗೂ ಪ್ರತಿಭಟನಾ ಸ್ಥಳದಲ್ಲಿಯೇ ಇದ್ದರು. ಬಿಸಿಲಿನ ತಾಪಕ್ಕೆ ದೇಹ ಬಳಲುತ್ತಿದ್ದರೂ ಹೋರಾಟದಿಂದ ಹಿಂದೆ ಸರಿಯಲಿಲ್ಲ. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ರೈತ ಮುಖಂಡರ ಭಾಷಣಗಳಿಗೆ ಜೈಕಾರ ಹಾಕುತ್ತಾ ತಮ್ಮ ಆಕ್ರೋಶ ಹೊರಹಾಕಿದರು.

ಯುವ ರೈತರೊಂದಿಗೆ ವಯೋವೃದ್ಧರೂ ಹೋರಾಟದಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು. ಹೊಲದಲ್ಲಿ ದುಡಿದು ಬದುಕು ಕಟ್ಟಿಕೊಳ್ಳುವ ರೈತರು, ತಮ್ಮ ಬೆಳೆಗಳಿಗೆ ನ್ಯಾಯಯುತ ಬೆಲೆ ದೊರೆಯಬೇಕೆಂಬ ಬೇಡಿಕೆಯೊಂದಿಗೆ ಹೆದ್ದಾರಿಯ ಮೇಲೆಯೇ ಕುಳಿತು ಪ್ರತಿಭಟನೆ ನಡೆಸಿದರು.

ಕೃಷಿಯಲ್ಲಿ ಹೂಡಿಕೆ ಮಾಡಿದ ಹಣ ಮರಳಿ ಸಿಗುತ್ತದೆಯೇ, ಕುಟುಂಬದ ಖರ್ಚು ನಿಭಾಯಿಸಲು ಸಾಧ್ಯವಾಗುತ್ತದೆಯೇ, ಮುಂದಿನ ಹಂಗಾಮಿಗೆ ಕೃಷಿ ಮುಂದುವರಿಸಲು ಸಾಧ್ಯವೇ ಎಂಬ ಆತಂಕಗಳೂ ರೈತರ ಆಕ್ರೋಶದ ಹಿಂದೆ ಇವೆ. ಕೃಷಿ ವೆಚ್ಚ ಹೆಚ್ಚಾಗುತ್ತಿರುವಾಗ ಬೆಳೆಗಳಿಗೆ ಸೂಕ್ತ ಬೆಲೆ ದೊರೆಯದಿದ್ದರೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಾರೆ ಎಂಬುದು ಹೋರಾಟಗಾರರ ವಾದವಾಗಿದೆ.

ಹೋರಾಟದ ಸ್ಥಳದಲ್ಲಿ ರೈತರಿಗೆ ಆಹಾರ ಮತ್ತು ನೀರಿನ ವ್ಯವಸ್ಥೆ ಕಲ್ಪಿಸಲು ಹಲವು ಮಂದಿ ಮುಂದೆ ಬಂದರು. ರೈತ ಮಹಿಳೆಯರು ತಮ್ಮ ಮನೆಗಳಿಂದ ರೊಟ್ಟಿ ತಯಾರಿಸಿಕೊಂಡು ಬಂದು ಪ್ರತಿಭಟನಾಕಾರರಿಗೆ ನೀಡಿದರು. ಕೆಲವರು ನೀರಿನ ಬಾಟಲಿಗಳನ್ನು ಉಚಿತವಾಗಿ ವಿತರಿಸಿದರೆ, ಇನ್ನು ಕೆಲವರು ಹಣ್ಣುಗಳನ್ನು ತಂದು ಹಂಚಿದರು.

ರೈತರು ತಮ್ಮ ಹಕ್ಕಿಗಾಗಿ ರಸ್ತೆಯ ಮೇಲೆ ಕುಳಿತಿದ್ದರೆ, ಅವರ ಹಸಿವು ನೀಗಿಸಲು ರೈತ ಕುಟುಂಬಗಳೇ ನೆರವಾದವು. ಈ ದೃಶ್ಯ ರೈತ ಹೋರಾಟದ ಹಿಂದಿರುವ ಪರಸ್ಪರ ಸಹಕಾರ ಮತ್ತು ಒಗ್ಗಟ್ಟನ್ನು ಪ್ರತಿಬಿಂಬಿಸಿತು.

ಹೋರಾಟವೆಂದರೆ ಕೇವಲ ಘೋಷಣೆ ಕೂಗುವುದು ಮಾತ್ರವಲ್ಲ ಹೋರಾಟದಲ್ಲಿ ಪಾಲ್ಗೊಂಡವರ ಅಗತ್ಯಗಳನ್ನು ಅರಿತು ನೆರವಾಗುವುದೂ ಅದರ ಭಾಗ ಎಂಬುದನ್ನು ರೈತ ಮಹಿಳೆಯರು ತೋರಿಸಿಕೊಟ್ಟರು.

ರೈತರ ಪ್ರಮುಖ ಬೇಡಿಕೆ ಕಬ್ಬಿಗೆ ಪ್ರತಿ ಟನ್‌ಗೆ ₹5,500 ಬೆಲೆ ನಿಗದಿಪಡಿಸುವುದಾಗಿದೆ. ಇದರೊಂದಿಗೆ ಸಕ್ಕರೆಗೆ ಪ್ರತಿ ಕೆ.ಜಿ.ಗೆ ₹60 ಎಂಎಸ್‌ಪಿ ನಿಗದಿಪಡಿಸಬೇಕು, ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೊಳಿಸಬೇಕು ಹಾಗೂ ಕರ್ನಾಟಕದಲ್ಲಿ ಉತ್ಪಾದನೆಯಾಗುವ ಎಥೆನಾಲ್ ಖರೀದಿಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ರೈತ ಸಂಘಟನೆಗಳು ಆಗ್ರಹಿಸಿದ್ದಾರೆ.

ಕಬ್ಬು ಬೆಳೆಯಲು ಬೀಜ, ಗೊಬ್ಬರ, ಔಷಧ, ನೀರಾವರಿ, ಕಾರ್ಮಿಕರು, ಕಟಾವು ಮತ್ತು ಸಾಗಣೆ ಸೇರಿದಂತೆ ಹಲವು ಹಂತಗಳಲ್ಲಿ ಹಣ ಖರ್ಚಾಗುತ್ತದೆ. ಕಬ್ಬು ಬೆಳೆದು ಕಾರ್ಖಾನೆಗೆ ತಲುಪುವವರೆಗೆ ರೈತರು ಸಮಯ, ಶ್ರಮ ಮತ್ತು ಬಂಡವಾಳ ಹೂಡಿಕೆ ಮಾಡಬೇಕಾಗುತ್ತದೆ. ಇಷ್ಟೆಲ್ಲ ವೆಚ್ಚ ಮಾಡಿದ ಬಳಿಕವೂ ನಿರೀಕ್ಷಿತ ಬೆಲೆ ಸಿಗದಿದ್ದರೆ ಕೃಷಿಯಿಂದ ಲಾಭಪಡೆಯುವುದು ಕಷ್ಟವಾಗುತ್ತದೆ ಎಂಬುದು ರೈತರ ಅಳಲು.

ಕಬ್ಬಿನ ಬೆಲೆಯನ್ನು ಹೆಚ್ಚಿಸುವಂತೆ ಕಾರ್ಖಾನೆಗಳನ್ನು ಕೇಳಿದಾಗ, ಸಕ್ಕರೆಗೆ ದೊರೆಯುವ ಬೆಲೆಯನ್ನೂ ಪರಿಗಣಿಸಬೇಕಾಗುತ್ತದೆ ಎಂಬ ವಾದ ಕೇಳಿಬರುತ್ತಿದೆ. ಹೀಗಾಗಿ ಸಕ್ಕರೆಗೆ ಎಂಎಸ್‌ಪಿ ಹೆಚ್ಚಳ, ಕಬ್ಬಿಗೆ ಸೂಕ್ತ ಬೆಲೆ ಮತ್ತು ಎಥೆನಾಲ್ ಖರೀದಿ ವಿಚಾರಗಳಲ್ಲಿ ಸರ್ಕಾರಗಳು ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕೆಂಬುದು ರೈತರ ಆಗ್ರಹವಾಗಿದೆ.

ಹೋರಾಟವನ್ನು ಉದ್ದೇಶಿಸಿ ಮಾತನಾಡಿದ ರೈತ ಮುಖಂಡ ಶಶಿಕಾಂತ ಗುರೂಜಿ, ಕಬ್ಬು ಬೆಳೆಗಾರರಿಗೆ ಪ್ರತಿ ಟನ್‌ಗೆ ₹5,500 ಸಿಗುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಘೋಷಿಸಿದರು.

ಸೆಪ್ಟೆಂಬರ್ 29ರಂದು ಹುಬ್ಬಳ್ಳಿಯಲ್ಲಿ ಹೋರಾಟ ನಡೆಸಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರನ್ನು ಭೇಟಿಯಾಗಲು ಪ್ರಯತ್ನಿಸಿದಾಗ ಅವರು ದೆಹಲಿಗೆ ತೆರಳಿದ್ದಾರೆ ನಾವು ಅವರಿಗೆ ಮೊದಲೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಈ ಕಾರಣಕ್ಕೆ ಈ ಹೋರಾಟ ಎಂದು ಹೇಳಿದರು.

ರೈತರ ಬೇಡಿಕೆಗಳು ಈಡೇರುವವರೆಗೂ ಹೋರಾಟ ಮುಂದುವರಿಯಲಿದೆ. ಎಂಎಸ್‌ಪಿ ಹೆಚ್ಚಳದ ಬೇಡಿಕೆ ಈಡೇರಿದ ಬಳಿಕ ಮಹದಾಯಿ ಯೋಜನೆ ಅನುಷ್ಠಾನಕ್ಕೂ ಹೋರಾಟ ನಡೆಸಲಾಗುವುದು ಪ್ರಹ್ಲಾದ ಜೋಶಿಯವರ ವಿರುದ್ಧ ನಮ್ಮ ಹೋರಾಟ ಮುಂದುವರೆಯಲಿದೆ ಎಂದು ಎಚ್ಚರಿಸಿದರು.

ಜತೆ ಮಾತನಾಡಿದ ರೈತ ಸಂಘಟನೆಯ ಬೆಳಗಾವಿ ಜಿಲ್ಲಾ ಕಾರ್ಯಾಧ್ಯಕ್ಷ ಮಂಜುನಾಥ ಪೂಜೇರಿ, ದೆಹಲಿಯಲ್ಲಿ ನಡೆದ ಸಭೆಯಲ್ಲಿ ರೈತರನ್ನು ಕರೆಸಿಕೊಂಡು ಸಮಿತಿ ರಚಿಸುವುದಾಗಿ ತಿಳಿಸಲಾಗಿದೆ. ಆದರೆ, ಬೇಡಿಕೆಗಳ ಈಡೇರಿಕೆಯ ಕುರಿತು ಸ್ಪಷ್ಟ ನಿರ್ಧಾರ ಕೈಗೊಳ್ಳದ ಕಾರಣ ರಾಜ್ಯದಾದ್ಯಂತ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು.

ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬಿಗೆ ಹೆಚ್ಚಿನ ಬೆಲೆ ಕೇಳಿದಾಗ, ಸಕ್ಕರೆಗೆ ಪ್ರಸ್ತುತ ದೊರೆಯುವ ಬೆಲೆಯ ಕಾರಣ ನೀಡಿ ಹೆಚ್ಚಿನ ದರ ನೀಡಲು ಸಾಧ್ಯವಿಲ್ಲ ಎಂದು ಹೇಳಲಾಗುತ್ತಿದೆ. ಆದ್ದರಿಂದ ಸಕ್ಕರೆಗೆ ಎಂಎಸ್‌ಪಿ ಹೆಚ್ಚಿಸಬೇಕು. ಕರ್ನಾಟಕದಲ್ಲಿ ಉತ್ಪಾದನೆಯಾಗುವ ಎಥೆನಾಲ್ ಅನ್ನು ಬೇರೆ ರಾಜ್ಯಗಳಲ್ಲಿರುವ ವ್ಯವಸ್ಥೆಯಂತೆ ಖರೀದಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಕುರಿತು ಜತೆ ಮಾತನಾಡಿದ ರೈತ ಸಂಘಟನೆಯ ಮುಖಂಡ ನಿಂಗನಗೌಡ ಪಾಟೀಲ, ದೆಹಲಿಯಲ್ಲಿ ನಡೆದ ಸಭೆಯಿಂದ ರೈತರಿಗೆ ನಿರೀಕ್ಷಿತ ಫಲಿತಾಂಶ ಸಿಗದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ಮುಂದುವರಿಸಲಾಗುತ್ತಿದೆ ಎಂದರು.

ಡೀಸೆಲ್, ಪೆಟ್ರೋಲ್ ಹಾಗೂ ಕೃಷಿಗೆ ಅಗತ್ಯವಿರುವ ವಸ್ತುಗಳ ಬೆಲೆ ಏರಿಕೆಯಾಗುತ್ತಿದ್ದರೂ ರೈತರ ಉತ್ಪನ್ನಗಳಿಗೆ ತಕ್ಕ ಬೆಲೆ ಸಿಗುತ್ತಿಲ್ಲ. ರೈತರನ್ನು ದೆಹಲಿಗೆ ಕರೆಸಿಕೊಂಡು ಸಭೆ ನಡೆಸುವುದಷ್ಟೇ ಅಲ್ಲ, ಅವರ ಬೇಡಿಕೆಗಳಿಗೆ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ರೈತರ ಸಮಸ್ಯೆಗಳಿಗೆ ಕೇಂದ್ರ, ಸರ್ಕಾರ ಗಂಭೀರವಾಗಿ ಸ್ಪಂದಿಸಬೇಕು. ಬೆಳೆಗಳಿಗೆ ನ್ಯಾಯಯುತ ಬೆಲೆ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ನಾವು ನಾಟಕ ಮಾಡಲು ಬಂದಿಲ್ಲ

ಮಾತನಾಡಿದ ರೈತ ಈರಪ್ಪ, ರೈತರು ತಮ್ಮ ಹಕ್ಕಿಗಾಗಿ ಹೋರಾಟಕ್ಕೆ ಬಂದಿದ್ದಾರೆಯೇ ಹೊರತು ನಾಟಕ ಮಾಡಲು ಬಂದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರು ದುಡಿದಾಗ ಮಾತ್ರ ಜನರಿಗೆ ಅನ್ನ ದೊರೆಯುತ್ತದೆ. ಆದರೆ, ರೈತರ ಕಷ್ಟಗಳಿಗೆ ಸೂಕ್ತ ಪರಿಹಾರ ಸಿಗುತ್ತಿಲ್ಲ. ದೆಹಲಿಗೆ ರೈತರನ್ನು ಕರೆಸಿಕೊಂಡ ಬಳಿಕ ಎಂಎಸ್‌ಪಿ ಹೆಚ್ಚಳದ ಕುರಿತು ನಿರ್ಧಾರ ಕೈಗೊಳ್ಳಬೇಕಿತ್ತು. ಮಹದಾಯಿ ಯೋಜನೆ ಬಗ್ಗೆಯೂ ಕ್ರಮ ಕೈಗೊಳ್ಳಬೇಕಿತ್ತು ಎಂದು ಹೇಳಿದರು.

ಕಬ್ಬಿಗೆ ನ್ಯಾಯಯುತ ಬೆಲೆ ದೊರೆಯುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಎಚ್ಚರಿಸಿದರು.

ಹೆದ್ದಾರಿ ಬಂದ್‌ನಿಂದ ಪಾದಯಾತ್ರೆಯವರೆಗೆ

ಹತ್ತರಗಿ ಟೋಲ್ ನಾಕಾದಲ್ಲಿ ಎರಡು ದಿನಗಳ ಕಾಲ ನಡೆದ ಹೆದ್ದಾರಿ ತಡೆ ಪ್ರತಿಭಟನೆಯ ಬಳಿಕ ರೈತರು ಮೂರನೇ ದಿನ ಪಾದಯಾತ್ರೆಯ ಮೂಲಕ ಹೋರಾಟ ಮುಂದುವರಿಸಲು ನಿರ್ಧರಿಸಿದರು. ಸಾರ್ವಜನಿಕರಿಗೆ ವಾಹನ ಸಂಚಾರದಲ್ಲಿ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಹೆದ್ದಾರಿ ತಡೆಯನ್ನು ತೆರವುಗೊಳಿಸಿ ಹುಬ್ಬಳ್ಳಿಯತ್ತ ತೆರಳಲು ಮುಂದಾಗಿರುವುದಾಗಿ ರೈತ ಸಂಘಟನೆಯ ರಾಜ್ಯಾಧ್ಯಕ್ಷ ಚೂನಪ್ಪ ಪೂಜೇರಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು ಕೇಂದ್ರ ಸರ್ಕಾರವು ನೀತಿ ಆಯೋಗದ ಮಾಜಿ ಸದಸ್ಯ ಪ್ರೊ. ರಮೇಶ್ ಚಂದ್ ಅವರ ಅಧ್ಯಕ್ಷತೆಯಲ್ಲಿ ಜಂಟಿ ಸಮಿತಿ ರಚಿಸಿರುವ ಕುರಿತು ಮಾಧ್ಯಮಗಳಲ್ಲಿ ನೋಡಿದ್ದೇನೆ ಎಂದು ರೈತ ಸಂಘಟನೆಯ ರಾಜ್ಯಾಧ್ಯಕ್ಷ ಚೂನಪ್ಪ ಪೂಜೇರಿ ತಿಳಿಸಿದ್ದಾರೆ.

ಸಮಿತಿ ರಚನೆಯಿಂದ ಮಾತ್ರ ರೈತರ ಬೇಡಿಕೆಗಳು ಈಡೇರಿದಂತಾಗುವುದಿಲ್ಲ. ರೈತರಿಗೆ ನ್ಯಾಯಯುತ ಬೆಲೆ ದೊರೆಯುವಂತೆ ಸರ್ಕಾರ ನಿರ್ಧಾರ ಕೈಗೊಳ್ಳಬೇಕು. ಸಕ್ಕರೆಗೆ ಪ್ರತಿ ಕೆ.ಜಿ.ಗೆ ₹60 ಎಂಎಸ್‌ಪಿ ನಿಗದಿಪಡಿಸಬೇಕು, ಕಬ್ಬಿಗೆ ಪ್ರತಿ ಟನ್‌ಗೆ ₹5,500 ಬೆಂಬಲ ಬೆಲೆ ನೀಡಬೇಕು. ಹಾಗೂ ಎಥೆನಾಲ್‌ನ ಸಂಪೂರ್ಣ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂಬುದು ರೈತರ ಪ್ರಮುಖ ಬೇಡಿಕೆಗಳಾಗಿವೆ. ಈ ಬೇಡಿಕೆಗಳು ಈಡೇರುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಚೂನಪ್ಪ ಪೂಜೇರಿ ಸ್ಪಷ್ಟಪಡಿಸಿದ್ದಾರೆ.

ಎರಡು ತಿಂಗಳ ಹಿಂದೆಯೇ ರೈತರು ತಮ್ಮ ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟಿದ್ದಾರೆ. ಒಂದು ತಿಂಗಳ ಹಿಂದೆಯೇ ಹುಬ್ಬಳ್ಳಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ನಿವಾಸದ ಮುಂದೆ ಲಕ್ಷಾಂತರ ರೈತರು ಧರಣಿ ನಡೆಸಿದ್ದಾರೆ. ಆಗಲೇ ಸರ್ಕಾರ ಸೂಕ್ತ ಕ್ರಮ ಕೈಗೊಂಡಿದ್ದರೆ ಸಮಸ್ಯೆ ಬಗೆಹರಿಯುತ್ತಿತ್ತು ಎಂದು ಪಾದಯಾತ್ರೆಯ ಸಂದರ್ಭದಲ್ಲಿ ಚೂನಪ್ಪ ಪೂಜೇರಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹತ್ತರಗಿ ಟೋಲ್ ನಾಕಾದಲ್ಲಿ ರಾಷ್ಟ್ರೀಯ ಹೆದ್ದಾರಿ ತಡೆದು ಎರಡು ದಿನಗಳ ಕಾಲ ಪ್ರತಿಭಟನೆ ನಡೆಸಿದ್ದ ರೈತರು, ಮೂರನೇ ದಿನ ಹೆದ್ದಾರಿ ತಡೆಯನ್ನು ತೆರವುಗೊಳಿಸಿ ಪಾದಯಾತ್ರೆ ಆರಂಭಿಸಿದ್ದರು. ರೈತರ ಈ ಪಾದಯಾತ್ರೆ ಇಂದು ಸಂಜೆ ಎಂ.ಕೆ. ಹುಬ್ಬಳ್ಳಿಗೆ ತಲುಪಲಿದ್ದು, ಅಲ್ಲಿ ರೈತರು ವಾಸ್ತವ್ಯ ಹೂಡಲಿದ್ದಾರೆ.

ಪಾದಯಾತ್ರೆಯಲ್ಲಿ ರೈತರು ತಮ್ಮ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಕೇಂದ್ರ ಸರ್ಕಾರದ ಗಮನ ಸೆಳೆಯಲು ಪ್ರಯತ್ನಿಸುತ್ತಿದ್ದಾರೆ. ಕಬ್ಬು ಬೆಳೆಗಾರರಿಗೆ ನ್ಯಾಯಯುತ ಬೆಲೆ ದೊರೆಯುವವರೆಗೂ ಹೋರಾಟ ಮುಂದುವರಿಸುವ ಸಂಕಲ್ಪವನ್ನು ರೈತ ಮುಖಂಡರು ವ್ಯಕ್ತಪಡಿಸಿದ್ದಾರೆ.

ನಾಳೆ ಕಿತ್ತೂರಿನಲ್ಲಿ ಬೃಹತ್ ಕಾರ್ಯಕ್ರಮ

ಪಾದಯಾತ್ರೆಯ ಮುಂದಿನ ಹಂತವಾಗಿ ನಾಳೆ ಕಿತ್ತೂರಿನಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಗಿದೆ. ವಿವಿಧ ಪ್ರದೇಶಗಳಿಂದ ರೈತರು ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಕಬ್ಬಿನ ಬೆಲೆ ನಿಗದಿ, ಸಕ್ಕರೆಗೆ ಎಂಎಸ್‌ಪಿ ಹೆಚ್ಚಳ ಹಾಗೂ ಎಥೆನಾಲ್ ಖರೀದಿಗೆ ಸಂಬಂಧಿಸಿದ ಬೇಡಿಕೆಗಳನ್ನು ಮತ್ತೊಮ್ಮೆ ಸರ್ಕಾರದ ಮುಂದಿಡಲು ರೈತ ಮುಖಂಡರು ಸಿದ್ಧತೆ ನಡೆಸಿದ್ದಾರೆ.

ರೈತರ ಹೋರಾಟವು ಕೇವಲ ಒಂದು ಟನ್ ಕಬ್ಬಿನ ಬೆಲೆಗೆ ಸೀಮಿತವಾಗಿಲ್ಲ. ಕೃಷಿ ವೆಚ್ಚಕ್ಕೆ ತಕ್ಕ ಆದಾಯ, ಬೆಳೆಗಳಿಗೆ ನ್ಯಾಯಯುತ ಬೆಲೆ, ಉತ್ಪನ್ನಗಳ ಖರೀದಿಗೆ ಖಾತರಿ ಮತ್ತು ಕೃಷಿಯನ್ನು ಲಾಭದಾಯಕವಾಗಿಸುವ ನೀತಿಗಳ ಬೇಡಿಕೆಯೂ ಇದರ ಹಿಂದಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR